ಸಂಪುಟ : 9 ಸಂಚಿಕೆ 113 ಪುಟ : 4 ಬೆಲೆ: 3.00 ಗುರುವಾರ ಜೂನ್ 6 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ






Volume : 9 Issue : 113 Pages : 4 Price : 3.00 Thursday June 6 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನಾಳೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಮುಂಡರಗಿ, 110 ಕೆವ್ಹಿ ಡಂಬಳ ಹಾಗೂ 110 ಕೆವ್ಹಿ ಶಿಂಗಟಾಲೂರು ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ಜೂನ್ 7ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 6 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

110 ಕೆ.ವ್ಹಿ. ವಿದ್ಯುತ್ ಉಪಕೇಂದ್ರ ಡಂಬಳ–110 ಕೆವ್ಹಿ ಐಪಿಪಿ ಮೆ.ಸುಜಲಾನ್ ಲಿ., ಹಾರೋಗೇರಿ, ಮೆ.ಎನರ್ಕಾನ್ ಲಿ., ಮೆ. ಅಕಿಲಾಗ್ಯಾ ಸೋಲಾರ, ಮೆ.ಚುರ್ಚಿಹಾಳ ನೀರಾವರಿ, 110ಕೆ.ವ್ಹಿ. ಡಂಬಳ ವಿದ್ಯುತ್ ಉಪಕೇಂದ್ರದಿಂದ ಹೊರ ಹೋಗುವ ಎಲ್ಲ 11ಕೆ.ವ್ಹಿ. ಮಾರ್ಗಗಳು, 110ಕೆ.ವ್ಹಿ. ವಿದ್ಯುತ್ ಉಪಕೇಂದ್ರ ಮುಂಡರಗಿ–110ಕೆ.ವ್ಹಿ. ಐಪಿಪಿ ಮೆ.ವಿಜಯನಗರ ಶುಗರ್ಸ್ ಲಿ., ಮೆ.ಬೀಡನಾಳ ನೀರಾವರಿ, 110ಕೆ.ವ್ಹಿ. ಮುಂಡರಗಿ ವಿದ್ಯುತ್ ಉಪಕೇಂದ್ರದಿಂದ ಹೊರ ಹೋಗುವ ಎಲ್ಲ 11ಕೆ.ವ್ಹಿ. ಮಾರ್ಗಗಳು, 110ಕೆ.ವ್ಹಿ. ವಿದ್ಯುತ್ ಉಪಕೇಂದ್ರ ಶಿಂಗಟಾಲೂರು–110ಕೆ.ವ್ಹಿ. ಶಿಂಗಟಾಲೂರು ವಿದ್ಯುತ್ ಉಪಕೇಂದ್ರದಿಂದ ಹೊರಹೋಗುವ ಎಲ್ಲ 11ಕೆ. ಕೆ.ವ್ಹಿ. ಮಾರ್ಗಗಳು, 110 ಕೆವ್ಹಿ ಮುಂಡರಗಿ, 110 ಕೆವ್ಹಿ ಡಂಬಳ ಹಾಗೂ 110 ಕೆವ್ಹಿ ಶಿಂಗಟಾಲೂರು ವಿದ್ಯುತ್ ವಿತರಣಾ ಕೇಂದ್ರಗಳಿಂದ ವಿತರಣೆಯಾಗುವ ಎಲ್ಲಾ ನಗರ ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ಹಾಗೂ ಮೇಲೆ ತಿಳಿಸಿದ ಎಲ್ಲ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕೆಂದು ಪ್ರಕಟಣೆ ವಿನಂತಿಸಿದೆ.

## ವರ್ಷವಿಡಿ ಪರಿಸರ ದಿನಾಚರಣೆ ನಡೆಸೋಣ

■ವಿಜಯಸಾಕ್ಷಿ ಸುದ್ದಿ, ಗದಗ

ಮಾನವ ಸಂಕುಲದ ಉಳಿವಿಗಾಗಿ ನಮ್ಮ ಸುತ್ತ–ಮುತ್ತಲಿನ ಪರಿಸರವನ್ನು ಸಂರಕ್ಷಿಸುವುದು ಅನಿವಾರ್ಯವಾಗಿದೆ ಎಂದು ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ್ ಬಿರಾದಾರ ಅಭಿಪ್ರಾಯಪಟ್ಟರು.

ನರಗುಂದ ತಾಲೂಕಿನ ಕನಕೀಕೊಪ್ಪ ಗ್ರಾ.ಪಂ ವ್ಯಾಪ್ತಿಯ ಗುರ್ಲಕಟ್ಟಿ ಗ್ರಾಮದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ನರೇಗಾ ಯೋಜನೆಯ ಅಮೃತ ಸರೋವರ ಕಾರ್ಯಕ್ರಮದಡಿ ಅಭಿವೃದ್ಧಿಪಡಿಸಿದ ಗ್ರಾಮದ ಕೆರೆಯ ಬಳಿ ಹಮ್ಮಿಕೊಂಡ ಪರಿಸರ ದಿನಾಚರಣೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಜೂನ್ 5 ಒಂದೇ ದಿನ ಪರಿಸರ ದಿನಾಚರಣೆ ಕಾರ್ಯಕ್ರಮ, ಜಾಗೃತಿ ಆಗಬಾರದು. ನಾವೆಲ್ಲ ಸೇರಿ ವಿವಿಧ ಸಸಿಗಳನ್ನು ನಮ್ಮ ಸುತ್ತ–ಮುತ್ತಲಿನ ಪರಿಸರದಲ್ಲಿ ನೆಟ್ಟು ರಕ್ಷಿಸುವುದರ ಮೂಲಕ ವರ್ಷವಿಡೀ ಪರಿಸರ ದಿನಾಚರಣೆ ನಡೆಸುವಂತಾಗಬೇಕು. ಪರಿಸರ ಸಂರಕ್ಷಣೆಯಿಂದ ವ್ಯತ್ಯಾಸವಾಗುತ್ತಿರುವ ವಾತಾವರಣವನ್ನು ಸಮತೋಲನಗೊಳಿಸಬಹುದು. ಸಮಾಜದ ಕಟ್ಟಕಡೆಯ ವ್ಯಕ್ತಿಯೂ ಕೂಡಾ ಪರಿಸರ ರಕ್ಷಣೆ ಬಗ್ಗೆ ಕಾಳಜಿವಹಿಸಬೇಕು ಎಂದರು.

ಪಂಚಾಯತ್ ರಾಜ್ ಸಹಾಯಕ ನಿರ್ದೇಶಕರಾದ ಕೃಷ್ಣಮ್ಮ ಹಾದಿಮನಿ ಮಾತನಾಡಿ, ಪರಿಸರ ಸಂರಕ್ಷಣೆಯಾದಾಗ ಮಾತ್ರ ಮಳೆ–ಬೆಳೆ ಎಲ್ಲವೂ ಸಾಧ್ಯ. ಸುತ್ತಮುತ್ತಲಿನ ಗಿಡಗಳನ್ನು ಕಡಿದು ಹಾಕುವುದರಿಂದ ನಮ್ಮ ಪರಿಸರವನ್ನು ನಾವೇ ಹಾಳು ಮಾಡಿಕೊಂಡಂತೆ. ಹೀಗಾಗಿ ಮನೆ ಸುತ್ತ–ಮುತ್ತ ಖಾಲಿಯಿರುವ ಸ್ಥಳದಲ್ಲಿ ಸಸಿಗಳನ್ನು ನೆಟ್ಟು ಪರಿಸರ ಉಳಿಸೋಣ ಎಂದರು.

ಕಾರ್ಯಕ್ರಮದಲ್ಲಿ ತಾಲೂಕಿನ ನರೇಗಾ ಸಿಬ್ಬಂದಿ ಸುರೇಶ್ ಬಾಳಿಕಾಯಿ, ಅಲ್ತಾಫ್ ಅಮ್ಮೀನಬಾವಿ, ಬಸವರಾಜ ಚಿಮ್ಮನಕಟ್ಟಿ, ಗ್ರಾಮದ ನರೇಗಾ ಕೂಲಿಕಾರರು ಮತ್ತು ಕಣಕೀಕೊಪ್ಪ ಗ್ರಾ.ಪಂ ಸಿಬ್ಬಂದಿ ವರ್ಗದವರು ಹಾಜರಿದ್ದರು.

### ಗದಗ ಅರಣ್ಯ ವಿಭಾಗದ ವತಿಯಿಂದ ಸಾಲುಮರದ ತಿಮ್ಮಕ್ಕ ಉದ್ಯಾನದಲ್ಲಿ ಪರಿಸರ ದಿನ ಆಚರಣೆ

## ಸೈಕಲ್ ಜಾಥಾ, ಬೀದಿ ನಾಟಕ ಪ್ರದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸಾಲುಮರದ ತಿಮ್ಮಕ್ಕ ಉದ್ಯಾನದಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಾರ್ಯಾಲಯ ಗದಗ ವಿಭಾಗದ ವತಿಯಿಂದ 'ಅವರ್ ಲ್ಯಾಂಡ್ ಅವರ್ ಫ್ಯೂಚರ್' ಶೀರ್ಷಿಕೆಯಡಿ ಪರಿಸರ ದಿನವನ್ನು ಆಚರಿಸಲಾಯಿತು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಬಸವರಾಜ, ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರಾಜೇಶ್ವರ ಶೆಟ್ಟಿ, ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದಶಿ ಸಿ.ಎಸ್. ಶಿವನಗೌಡ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಜಿಲ್ಲಾ ಪಂಚಾಯತ್ ಸಿಇಒ ಭರತ್ ಎಸ್., ಉಪ ಅರಣ್ಯ ಸಂರಕ್ಷಣಾಧಿಕಾರಿ ಲೇಖರಾಜ್ ಮೀನಾ ಅವರು ಸಸಿಗಳನ್ನು ನೆಟ್ಟು, ನೀರುಣಿಸಿದರು.

ಇದಕ್ಕೂ ಮುನ್ನ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ




ಹಮ್ಮಿಕೊಂಡಿದ್ದ ಸೈಕಲ್ ಜಾಥಾಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಜಿಲ್ಲಾ ಪಂಚಾಯತ್ ಸಿಇಒ ಭರತ್ ಎಸ್., ಉಪ ಅರಣ್ಯ ಸಂರಕ್ಷಣಾಧಿಕಾರಿ ಲೇಖರಾಜ್ ಮೀನಾ ಚಾಲನೆ ನೀಡಿದರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಿಂದ ಆರಂಭವಾದ ಸೈಕಲ್ ಜಾಥಾ ಹಳೇ ಡಿಸಿ ಆಫೀಸ್ ಸರ್ಕಲ್, ಮುಳಗುಂದ ನಾಕಾ ಮಾರ್ಗವಾಗಿ ತಾಲೂಕಿನ ಬಿಂಕದಕಟ್ಟಿಯ ಸಾಲು ಮರದ ತಿಮ್ಮಕ್ಕ ಸಸ್ಯೋದ್ಯಾನವರೆಗೆ ಸಾಗಿತು.

ಮಾರ್ಗಮಧ್ಯೆ ಹಳೆ ಜಿಲ್ಲಾಧಿಕಾರಿ ಕಚೇರಿ ಹಾಗೂ ಮುಳಗುಂದ ನಾಕಾದಲ್ಲಿ ಪರಿಸರ ಜಾಗೃತಿ ಕುರಿತು ಬೀದಿ ನಾಟಕ ಪ್ರದರ್ಶನದ ಮೂಲಕ ಸಾರ್ವಜನಿಕರಿಗೆ ಪರಿಸರ ಮಹತ್ವದ ಕುರಿತು ಜಾಗೃತಿ ಮೂಡಿಸಲಾಯಿತು.

ಇದೇ ಸಂದರ್ಭದಲ್ಲಿ ಪರಿಸರ ಪ್ರೇಮಿಗಳಾದ ಲಕ್ಷ್ಮೇಶ್ವರದ ಶಂಕರ ಬ್ಯಾಡಗಿ, ನರಗುಂದದ ನಜೀರಸಾಬ್ ಜಮಾದಾರ, ರೋಣದ ಮುತ್ತಣ್ಣ ತಿರ್ಲಾಪುರ, ಗದಗ ಕಿರಣ ಅವರನ್ನು ಸನ್ಮಾನಿಸಲಾಯಿತು. ಜೊತೆಗೆ ದಿನಗೂಲಿ ನೌಕರರಾದ ಸೊರಟೂರಿನ ಆನಂದ ಮಲ್ಲಾರಿ, ನೆಲ್ಲೂರಿನ ಶಾಂತಯ್ಯ ಬೆಳವಣಕಿ, ಗದುಗಿನ ಹನುಮಂತ ಮಾಚೇನಹಳ್ಳಿ, ಬಿಡ್ನಾಳದ ಚನ್ನಪ್ಪ ಕಿರದಾಳ, ಕಡಕೋಳದ ಚನ್ನವೀರಯ್ಯ ಗೊಳಗೇರಿಮಠ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

### ರಾಜ್ಯ ಸರ್ಕಾರದ ವಿರುದ್ಧ ಜನ ಬೇಸತ್ತು ಮೈತ್ರಿ ಬೆಂಬಲಿಸಿದ್ದಾರೆ: ಬಸವರಾಜ ಬೊಮ್ಮಾಯಿ

## ಮೋದಿಯವರ ರಾಜಕೀಯ ವಿಭಿನ್ನ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನರೇಂದ್ರ ಮೋದಿಯವರಿಗೆ ಎಂತಹ ಪರಿಸ್ಥಿತಿಯನ್ನೂ ನಿಭಾಯಿಸುವ ರಾಜಕೀಯ ಮುತ್ಸದ್ದಿತನ ಇದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಹಾವೇರಿ ಲೋಕಸಭಾ ಚುನಾವಣೆ ಗೆಲುವಿನ ಬಳಿಕ ಬುಧವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಾನು ಲೋಕಸಭೆಗೆ ಬಹಳ ವಿಶೇಷವಾಗಿ ಇರುವ ಸಂಧರ್ಭದಲ್ಲಿ ಆಯ್ಕೆಯಾದೆ. ಪ್ರಧಾನಿಗಳು ಹಾಗೂ ಪಕ್ಷದ ಹಿರಿಯರ ಮಾತಿನಂತೆ ಸ್ಪರ್ಧೆ ಮಾಡಿದೆ. ಅವರ ಲೆಕ್ಕಾಚಾರ ಸರಿಯಾಗಿದೆ. ದೇಶದಲ್ಲಿ ನೋಡಿದಾಗ ಮೋದಿ ಮೂರನೇ ಬಾರಿ ಪ್ರಧಾನಿ ಆಗುತ್ತಿದ್ದಾರೆ. ಕೆಲವು ಕಡೆ ನಿರೀಕ್ಷಿತ ಮಟ್ಟದಲ್ಲಿ ಗೆಲುವು ಸಾಧ್ಯವಾಗಿಲ್ಲ. ಎಂತಹ ಸಂದರ್ಭವನ್ನಾದರೂ ಮೋದಿ ನಿಭಾಯಿಸಲಿದ್ದಾರೆ ಎಂಬ ವಿಶ್ವಾಸವಿದೆ ಎಂದು ಹೇಳಿದರು.

ಮೋದಿಯವರು ಬಹಳ ವಿಭಿನ್ನವಾಗಿ ರಾಜ–ಕಾರಣ ನಡೆಸಿಕೊಂಡು ಬಂದಿದ್ದಾರೆ. ಗುಜರಾತ್ ಗಲಭೆಯನ್ನು ಸಮರ್ಥವಾಗಿ ನಿಭಾಯಿಸಿದರು. ಬಹಳ ಪೈಪೋಟಿ ಇದ್ದರೂ ಸಂಪೂರ್ಣ




ಮೆಜಾರಿಟಿ ತಂದರು. ಎರಡನೇ ಬಾರಿ ಬಹುಮತ ಹೆಚ್ಚಿಸಿ ಎನ್‌ಡಿಎ ವಿಸ್ತಾರ ಮಾಡಿದ್ದಾರೆ. ಇದೆಲ್ಲಾ ನೋಡಿದಾಗ ರಾಜಕೀಯವಾಗಿ ಮುತ್ಸದ್ದಿತನ ಪ್ರದರ್ಶಿಸಿದ್ದಾರೆ. ಇಂಡಿ ಘಟಬಂಧನ್ ನೋಡಿದರೆ ಅಲ್ಲಿ ಯಾವುದೇ ಬೆಳವಣಿಗೆ ಇಲ್ಲ. ಕಾಂಗ್ರೆಸ್ ನಂಬಿಕೊಂಡು ಹೋಗುವ ಕೆಲಸ ನಿತೀಶ್ ಕುಮಾರ್ ಅಥವಾ ಚಂದ್ರ ಬಾಬು ನಾಯ್ಡು ಮಾಡುವುದಿಲ್ಲ ಎಂದರು.

ಈ ಬಾರಿ ಎನ್‌ಡಿಎ ಸಾಧನೆ ಹೇಗಿದೆ ಅಂದರೆ, ಕಳೆದ ವಿಧಾನಸಭಾ ಚುನಾವಣೆಯಲ್ಲಿ ಹೋಲಿಸಿದರೆ ಈ ಬಾರಿ ಉತ್ತಮವಾಗಿದೆ. ಇದರಲ್ಲಿ ಜಾತಿ ಪ್ರಶ್ನೆ ಬರುವುದಿಲ್ಲ. ಮೋದಿ ಅವರನ್ನು ಅತ್ಯಂತ ಟೀಕೆ ಮಾಡಿದ್ದರು. ಕಾಂಗ್ರೆಸ್ ಮಿತ್ರ ಪಕ್ಷಗಳ ಹೆಗಲ ಮೇಲೆ ಕೂತು ಕೆಲಸ ಮಾಡಿದೆ. ಅವರ ಸ್ವಂತ ಬಲದಿಂದ ಅಲ್ಲ. ಮಿತ್ರ ಪಕ್ಷದ ಬಲದಿಂದ ಅಷ್ಟು ಸೀಟು ಗೆದ್ದಿದ್ದಾರೆ. ಜೆಡಿಎಸ್ ಜೊತೆಗಿನ ಮೈತ್ರಿ ದಕ್ಷಿಣ ಕರ್ನಾಟಕದಲ್ಲಿ ಉತ್ತಮವಾಗಿದೆ. ಉತ್ತಮ ಮತಗಳು ನಮಗೆ ಬಂದಿದೆ. ಜನ ಸರ್ಕಾರದ ವಿರುದ್ಧ ಬೇಸತ್ತು, ಮೈತ್ರಿ ಬೆಂಬಲಿಸಿದ್ದಾರೆ ಎಂದರು.

ಸಚಿವ ನಾಗೇಂದ್ರ ರಾಜೀನಾಮೆ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಅಕ್ರಮ ಸಾಬೀತಾಗಿದೆ, ಎಸ್‌ಐಟಿ ತನಿಖೆ ಮಾಡುತ್ತಿದೆ. ಸಿಬಿಐ ಪ್ರವೇಶವಾಗಿದೆ. ಎಸ್‌ಐಟಿ ಪ್ರಾಮಾಣಿಕವಾಗಿ ಕೆಲಸ ಮಾಡಿದರೆ ಸಮಸ್ಯೆ ಇಲ್ಲ. ಇಲ್ಲದಿದ್ದರೆ ಸಿಬಿಐ ತನಿಖೆ ಶುರು ಮಾಡಲಿದೆ ಎಂದು ಹೇಳಿದರು.

ಸಿದ್ದರಾಮಯ್ಯ ಮೋದಿ ಗ್ಯಾರಂಟಿ ಫೇಲ್ ಆಗಿದೆ ಎಂದು ಆರೋಪ ಮಾಡಿರುವ ಕುರಿತು ಕೇಳಿದ ಪ್ರಶ್ನೆಗೆ ಗ್ಯಾರಂಟಿ ನಡುವೆ ನಾವು ಸಾಧನೆ ಮಾಡಿದ್ದೇವೆ. ಇವರು ಕರ್ನಾಟಕದಲ್ಲಿ 20 ಸ್ಥಾನ ಗೆಲ್ಲುವುದಾಗಿ ಹೇಳಿದ್ದರು. 9ಕ್ಕೆ ಬಂದು ನಿಂತಿದ್ದಾರೆ. ಡಿಕೆ ಬ್ರದರ್ಸ್ ಸೋತಿದ್ದಾರೆ. ಅವರಿಗೆ ಮಾತನಾಡಲು ನೈತಿಕತೆ ಇಲ್ಲ ಎಂದು ಬಸವರಾಜ ಬೊಮ್ಮಾಯಿ ಹೇಳಿದರು.

## ಗಿಡಗಳನ್ನು ಮಕ್ಕಳಂತೆ ಪೋಷಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಐ.ಸಿ.ಎ.ಆರ್–ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ಜೂನ್ 5ರಂದು ವಿಶ್ವ ಪರಿಸರ ದಿನಾಚರಣೆ ಹಾಗೂ ಸಸಿ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮ ಉದ್ಘಾಟಿಸಿದ ಎಸ್.ಬಿ.ಐ–ಎ.ಎಸ್.ಎಫ್ ಆರ್‌ಸೆಟಿ ನಿರ್ದೇಶಕ ಪಿ.ಕೆ.ಹೊಸಮನಿ ಮಾತನಾಡಿ, ಸಾಲು ಮರದ ತಿಮಕ್ಕನನ್ನು ಮಾದರಿಯಾಗಿ ಇಟ್ಟುಕೊಂಡು ಎಲ್ಲರೂ ಸಸಿಯನ್ನು ನೆಟ್ಟು ಮಕ್ಕಳಂತೆ ಕಾಪಾಡಬೇಕು. ತನ್ಮೂಲಕ ನಮಗೆ ಶುದ್ಧವಾದ ಗಾಳಿ, ಮಳೆ ನೀರು ಸಿಗುತ್ತದೆ ಎಂದರು.

ಕೃಷಿ ಅಧಿಕಾರಿ ರಾಜೇಶ್ವರಿ ಚೆನಿವಾಲರ ಮಾತನಾಡಿ, ನೈಸರ್ಗಿಕ ಸಂಪತ್ತನ್ನು ಬೆಳಸುವುದು ಹಾಗೂ ಉಳಿಸುವುದು ನಮ್ಮೆಲ್ಲರ ಜವಾಬ್ದಾರಿ. ಈ ನಿಟ್ಟಿನಲ್ಲಿ ನಾವೆಲ್ಲರೂ ಪರಿಸರ ಸಂರಕ್ಷಣೆ ಮಾಡಬೇಕು. ಇಂತದೇ ಪರಿಸ್ಥಿತಿ ಮುಂದುವರೆದರೆ ನಾವು ಉಸಿರಾಡುವ ಗಾಳಿಯನ್ನೂ




ಕೂಡಾ ನಾವು ಬಾಟಲಿಯಲ್ಲಿ ತುಂಬಿಕೊಂಡು ಹೋಗುವ ಪರಿಸ್ಥಿತಿ ಉಂಟಾಗಬಹುದು. ಈ ನಿಟ್ಟಿನಲ್ಲಿ ನಾವೆಲ್ಲರೂ ಎಚ್ಚೆತ್ತುಕೊಂಡು ಹೆಚ್ಚು ಹೆಚ್ಚು ಗಿಡಮರಗಳನ್ನು ಬೆಳೆಸೋಣ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಕೇಂದ್ರದ ಮುಖ್ಯಸ್ಥರಾದ ಡಾ. ಸುಧಾ ಮಂಕಣಿ ಮಾತನಾಡಿ, ಏರುತ್ತಿರುವ ತಾಪಮಾನ, ಹವಾಮಾನ ವೈಪರಿತ್ಯ, ಮಳೆಯ ಕೊರತೆಯನ್ನು ನೀಗಿಸಲು ನಾವೆಲ್ಲರೂ ಗಿಡಗಳನ್ನು ನೆಡೋಣ ಎಂದರು.

ಹೇಮಾವತಿ ಹಿರೇಗೌಡರ ವಿಶ್ವ ಪರಿಸರ ದಿನಾಚರಣೆ ಮಹತ್ವದ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಎನ್.ಎಚ್. ಭಂಡಿ ಸ್ವಾಗತಿಸಿದರು. ಡಾ.ವಿನಾಯಕ ನಿರಂಜನ ಕಾರ್ಯಕ್ರಮ ನಿರೂಪಿಸಿದರು.

## ಪರಿಸರ ರಕ್ಷಣೆಯ ಜವಾಬ್ದಾರಿ ಎಲ್ಲರದಾಗಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿಶ್ವ ಪರಿಸರ ದಿನದಂದು ನೆಟ್ಟ ಸಸಿಗಳನ್ನು ವರ್ಷದುದ್ದಕ್ಕೂ ಸಂರಕ್ಷಿಸುವ ಗುರುತರ ಜವಾಬ್ದಾರಿ ಎಲ್ಲರದ್ದಾಗಿದ್ದು, ಈ ನಿಟ್ಟಿನಲ್ಲಿ ಸಂಕಲ್ಪ ಮಾಡಬೇಕಿದೆ ಎಂದು ಹಿರಿಯ ದಿವಾಣಿ ನ್ಯಾಯಾಧೀಶರಾದ ಪದ್ಮಶ್ರೀ ಆರ್.ಪಾಟೀಲ ಅಭಿಪ್ರಾಯಪಟ್ಟರು.

ಅವರು ಬುಧವಾರ ಪಟ್ಟಣದ ಸರಕಾರಿ ಪ್ರಾಥಮಿಕ ಶಾಲೆ ನಂ.1, ಕೋರ್ಟ್ ಆವರಣದಲ್ಲಿ ತಾಲೂಕಾ ಕಾನೂನು ಸೇವೆಗಳ ನೆರವು ಸಮಿತಿ, ವಕೀಲರ ಸಂಘ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ, ಅರಣ್ಯ ಇಲಾಖೆ, ಇವುಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ನಮ್ಮ ಸುತ್ತಲಿನ ಪ್ರಕೃತಿ, ಪರಿಸರ ಸಂರಕ್ಷಣೆ ಮಾಡುವ ಜತೆಗೆ ಪರಿಸರ ಬೆಳೆಸಿ ಸಂರಕ್ಷಿಸುವ ಸ್ವಯಂಪ್ರೇರಿತ ಕಾರ್ಯವಾಗಬೇಕು. ಪರಿಸರ ರಕ್ಷಣೆ ಎಂಬುದು ಕೇವಲ




ಒಂದು ದಿನದ ಘೋಷಣೆ–ಆಚರಣೆಯಾಗಬಾರದು.

ಆಮ್ಲಜನಕವನ್ನು ನೀಡುವ ಗಿಡಗಳಿಂದ ನಾವೆಲ್ಲರೂ ಉಸಿರಾಡುತ್ತಿದ್ದೇವೆ. ನಿರಂತರವಾಗಿ ಪರಿಸರದ ಮೇಲೆ ಅನ್ಯಾಯ ನಡೆಯುತ್ತಿದ್ದರೆ ಮುಂದಿನ ದಿನಗಳಲ್ಲಿ ಗಾಳಿಯನ್ನು ಸಹ ನಾವು ಹಣಕ್ಕೆ ಕೊಳ್ಳಬೇಕಾಗುವಂತಹ ಪರಿಸ್ಥಿತಿ ನಿರ್ಮಾಣವಾಗುವ ದಿನಗಳು ದೂರವಿಲ್ಲ ಎಂದು ಹೇಳಿದರು.

ವಕೀಲರ ಸಂಘದ ಅಧ್ಯಕ್ಷ ಬಿ.ಎಸ್. ಬಾಳೇಶ್ವರಮಠ ಮಾತನಾಡಿ, ಪ್ರತಿವರ್ಷ ಅರಣ್ಯ ಇಲಾಖೆ ಅನೇಕ ಸಂಘ–ಸಂಸ್ಥೆಗಳ ಸಹಾಯದಿಂದ ಸಾಕಷ್ಟು ಗಿಡಗಳನ್ನು ನೆಡುವ ಕಾರ್ಯವನ್ನು ಮಾಡುತ್ತಿದೆ. ಆದರೆ ಅವುಗಳ ಸಂರಕ್ಷಣೆ ಮಾಡುವ ನಿಟ್ಟಿನಲ್ಲಿ ಸಾರ್ವಜನಿಕರ ಸಹಕಾರ ಅತಿ ಮುಖ್ಯವಾಗಿದೆ. ಪರಿಸರ ಚೆನ್ನಾಗಿದ್ದರೆ ನಾವೆಲ್ಲರೂ ಆರೋಗ್ಯದಿಂದ ಇರಲು ಸಾಧ್ಯ ಎನ್ನುವದನ್ನು ಎಲ್ಲರೂ ಅರಿತುಕೊಂಡು ಗಿಡ–ಮರಗಳನ್ನು ರಕ್ಷಿಸುವ ಕಾರ್ಯ ಮಾಡುವಂತೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ವಕೀಲರ ಸಂಘದ ಉಪಾಧ್ಯಕ್ಷ ಎ.ಟಿ. ಕಟ್ಟಿಮನಿ, ವ್ಹಿ.ಎಸ್. ಪಶುಪತಿಹಾಳ, ವ್ಹಿ.ಎಸ್. ಪಶುಪತಿಹಾಳ, ಬಿ.ಎಸ್. ಪಾಟೀಲ, ಎಸ್.ಪಿ. ಬಳಿಗಾರ, ಎ.ಬಿ. ಪಾಟೀಲ, ಎನ್.ಎಸ್. ಸೊರಟೂರ, ಎಸ್.ಸಿ. ನರಸಮ್ಮನವರ, ಎನ್.ವೈ. ಗೊಬ್ಬರಗುಂಪಿ, ಸಿ.ಎಲ್. ಜಾಧವ್, ಎನ್.ಸಿ. ಅಮಾಸಿ, ಆರ್.ಎಂ. ಕುರಿ, ಅರಣ್ಯ ಇಲಾಖೆಯ ಎಸ್.ಎಲ್. ವಿಭೂತಿ ಮುಂತಾದವರಿದ್ದರು.

## ಸಂಪಾದಕೀಯ

# ಚಂದ್ರಬಾಬು ನಾಯ್ದು, ನಿತೀಶ್ ಇರೋವರೆಗೂ ಎನ್‌ಡಿಎ ಸರಕಾರ

ಲೋಕಸಭೆ ಚುನಾವಣೆಯ ಫಲಿತಾಂಶ ಬಿಜೆಪಿಗೆ ಭಾರಿ ಆಘಾತ ನೀಡಿದೆ. ಅಬ್ ಕಿ ಬಾರ್ ಚಾರ್ ಸೋ ಪಾರ್ ಎನ್ನುವ ಮಂತ್ರದೊಂದಿಗೆ ಚುನಾವಣೆ ಎದುರಿಸಿದವರು ಮೌನಕ್ಕೆ ಶರಣಾಗಿದ್ದಾರೆ. ಆದರೂ ಜನಾದೇಶವನ್ನು ಸ್ವೀಕರಿಸಿ ಮುಂದಿನ ಹಾದಿಯತ್ತ ಮುಖ ಮಾಡಿದ್ದಾರೆ.

ಬಿಜೆಪಿಗೆ ಮೈತ್ರಿಕೂಟ ಅನಿವಾರ್ಯವಾಗಿದೆ. ಅದರಲ್ಲೂ ಚಂದ್ರ ಬಾಬು ನಾಯ್ಡು ಹಾಗೂ ನಿತೀಶ್ ಕುಮಾರ್ ಇಲ್ಲದೆ ಸರ್ಕಾರ ರಚನೆ ಅತ್ಯಂತ ಕಠಿಣ ಎನ್ನುವ ಪರಿಸ್ಥಿತಿ ಎದುರಾಗಿದೆ. ಈ ಇಬ್ಬರು ನಾಯಕರು ಮೈತ್ರಿ ವಿಷಯದಲ್ಲಿ ನಂಬಿಕೆಗೆ ಅರ್ಹರಲ್ಲದಿದ್ದರೂ ಅವರನ್ನೇ ನಂಬಿ ಸರಕಾರ ಮಾಡಬೇಕಾದ ಅನಿವಾರ್ಯತೆ ಬಿಜೆಪಿಗೆ ಬಂದಿದೆ.

ಕಳೆದೊಂದು ದಶಕದ ಅವಧಿಯಲ್ಲಿ ಚಂದ್ರಬಾಬು ನಾಯ್ಡು ಮತ್ತು ನಿತೀಶ್ ಕುಮಾರ್, ಒಮ್ಮೆ ಬಿಜೆಪಿ ಜೊತೆ ಸಖ್ಯ ಬೆಳೆಸಿದರೆ ಮತ್ತೊಮ್ಮೆ ಕಾಂಗ್ರೆಸ್ ಕೈ ಹಿಡಿದಿದ್ದಾರೆ. ಅದರಲ್ಲೂ ನಿತೀಶ್ ಕುಮಾರ್ ಕೆಲ ತಿಂಗಳ ಹಿಂದಷ್ಟೇ ಬಿಜೆಪಿ ನೇತೃತ್ವದ ಎನ್.ಡಿ.ಎ ಮೈತ್ರಿಕೂಟ ಸೇರಿದ್ದರು.

ಪ್ರಧಾನಿ ನರೇಂದ್ರ ಮೋದಿ ವಿಶ್ವನಾಯಕ ಎನಿಸಿದರೂ ಈ ಇಬ್ಬರು ರಾಜನಾಯಕರ ನೆರವು ಇಲ್ಲದೆ ಮತ್ತೊಂದು ಅವಧಿಗೆ ವಿಶ್ವ ನಾಯಕನಾಗಲು ಸಾಧ್ಯವಿಲ್ಲ. ಹೀಗಾಗಿ ಚಂದ್ರಬಾಬು ನಾಯ್ಡು ಮತ್ತು ನಿತೀಶ್ ಕುಮಾರ್ ಮನವೊಲಿಸಿ ಸರ್ಕಾರ ರಚನೆಗೆ ಮುಂದಾಗಿದ್ದಾರೆ.

ಬಿಜೆಪಿ ಈ ಮೈತ್ರಿಕೂಟ ಸರ್ಕಾರವನ್ನು ಉಳಿಸಿಕೊಳ್ಳಬೇಕಾದರೆ, ನಿತೀಶ್ ಕುಮಾರ್ ಮತ್ತು ಚಂದ್ರಬಾಬು ನಾಯ್ಡು ಅವರನ್ನು ಕಾಪಾಡಿಕೊಳ್ಳಲೇಬೇಕು. ಈ ಇಬ್ಬರಲ್ಲಿ ಒಬ್ಬರು ಇಲ್ಲದಿದ್ದರೂ ಮೈತ್ರಿ ಸರ್ಕಾರ ಯಾವುದೇ ಅಡ್ಡಿ ಆತಂಕ ಇಲ್ಲದೆ ನಡೆಯುತ್ತದೆ.

ಒಂದೊಮ್ಮೆ ಈ ಇಬ್ಬರು ಕೈ ಕೊಟ್ಟರೆ, ಎನ್ ಡಿ ಎ ಅಧಿಕಾರದಿಂದ ದೂರ ಉಳಿಯಬೇಕಾದ ಪರಿಸ್ಥಿತಿ ಬರಲಿದೆ. ಎಲ್ಲಿಯವರೆಗೆ ನಿತೀಶ್ ಕುಮಾರ್ ಮತ್ತು ಚಂದ್ರಬಾಬು ನಾಯ್ಡು ದೂರ ದೂರ ಇರುತ್ತಾರೋ, ಅಲ್ಲಿಯವರೆಗೆ ಮಾತ್ರ ಎನ್‌ಡಿಎ ಸರಕಾರ ಅಧಿಕಾರದಲ್ಲಿ ಇರುತ್ತದೆ.

### ರಾಹುಲ್ ಗಾಂಧಿ ಕುರಿತು ಪ್ರಿಯಾಂಕಾ ಗಾಂಧಿ ಭಾವನಾತ್ಮಕ ಪೋಸ್ಟ್

## ನಿಮ್ಮ ಸಹೋದರಿಯಾಗಿರುವುದಕ್ಕೆ ಹೆಮ್ಮೆ ಪಡುತ್ತೇನೆ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಲೋಕಸಭಾ ಚುನಾವಣೆ ಫಲಿತಾಂಶದ ನಂತರ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರು ಸಹೋದರ ರಾಹುಲ್ ಗಾಂಧಿಯವರಿಗೆ ಭಾವನಾತ್ಮಕ ಪೋಸ್ಟ್ ಹಾಕಿದ್ದು, ಈ ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಅಮೋಘ ಪ್ರದರ್ಶನದಲ್ಲಿ ಅವರ ಪಾತ್ರವನ್ನು ಶ್ಲಾಘಿಸಿದ್ದಾರೆ. 'ನಾನು ನಿಮ್ಮ ಹೆಮ್ಮೆಯ ಸಹೋದರಿ' ಎಂದು ಹೇಳಿದ್ದಾರೆ.

"ಉತ್ತರ ಪ್ರದೇಶದಲ್ಲಿ ಪಕ್ಷದ ಉತ್ತಮ ಪ್ರದರ್ಶನದಲ್ಲಿ ತಮ್ಮ ಸಹೋದರಿ ಪ್ರಮುಖ ಪಾತ್ರ ವಹಿಸಿದ್ದಾರೆ" ಎಂದು ರಾಹುಲ್ ಗಾಂಧಿ ಮಾಧ್ಯಮಗಳಿಗೆ ಹೇಳಿದ ಒಂದು ದಿನದ ನಂತರಮ ಪ್ರಿಯಾಂಕಾ ಅವರಿಂದ ಮೆಚ್ಚುಗೆಯ ಪೋಸ್ಟ್ ಬಂದಿದೆ.

"ಅವರು ನಿಮಗೆ ಏನು ಹೇಳಿದರೂ ಮತ್ತು ಮಾಡಿದರೂ ನೀವು ಧೃಡವಾಗಿ ನಿಂತಿದ್ದೀರಿ ನೀವು ಯಾವುದೇ ವಿರೋಧಾಭಾಸಗಳನ್ನು ಎಂದಿಗೂ ಹಿಮ್ಮೆಟ್ಟಲಿಲ್ಲ, ಅವರು ನಿಮ್ಮ ನಂಬಿಕೆಯನ್ನು ಎಷ್ಟು ಅನುಮಾನಿಸಿದರೂ ನಂಬುವುದನ್ನು ನಿಲ್ಲಿಸಲಿಲ್ಲ, ಅವರು ಹರಡಿದ ಸುಳ್ಳುಗಳ ಅಗಾಧ ಪ್ರಚಾರದ ಹೊರತಾಗಿಯೂ ನೀವು ಸತ್ಯಕ್ಕಾಗಿ ಹೋರಾಡುವುದನ್ನು ನಿಲ್ಲಿಸಲಿಲ್ಲ. ನೀವು ಕೋಪ ಮತ್ತು ದ್ವೇಷವನ್ನು ಜಯಿಸಲು ಎಂದಿಗೂ ಅನುಮತಿಸಲಿಲ್ಲ. ಅವರು ನಿಮಗೆ ಪ್ರತಿದಿನ ಪ್ರೀತಿ, ಸತ್ಯ ಮತ್ತು ದಯೆಯಿಂದ ಹೋರಾಡಿದರು, ನಿಮ್ಮನ್ನು ನೋಡಲು ಸಾಧ್ಯವಾಗದವರು ಈಗ ನಿಮ್ಮನ್ನು ನೋಡುತ್ತಾರೆ; ನಿಮ್ಮನ್ನು ಯಾವಾಗಲೂ ನೋಡಿದ ಮತ್ತು ತಿಳಿದಿರುವ ನಾನು ನಿಮ್ಮ ಸಹೋದರಿ ಎಂದು ಹೆಮ್ಮೆಪಡುತ್ತೇನೆ" ಎಂದು ಪ್ರಿಯಾಂಕಾ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಗಾಂಧಿ ಬಂಧುಗಳು ಪಕ್ಷವನ್ನು ಒಂದು ದಶಕದಲ್ಲಿ ಅತ್ಯುತ್ತಮ ಲೋಕಸಭಾ ಚುನಾವಣೆಯ ಸಾಧನೆಗೆ ಕಾರಣರಾಗಿದ್ದಾರೆ. ಪಕ್ಷವು ಈ ಬಾರಿ 99 ಸ್ಥಾನಗಳನ್ನು ಗೆದ್ದಿದೆ. ಅದರ 2019ರ 52 ರ ಲೆಕ್ಕಾಚಾರದಿಂದ ದೊಡ್ಡ ಜಿಗಿತವಾಗಿದೆ. ಕಾಂಗ್ರೆಸ್ ಭಾಗವಾಗಿರುವ ಇಂಡಿಯಾ ಬ್ಲಾಕ್, ಎಲ್ಲಾ ಚುನಾವಣೋತ್ತರ ಸಮೀಕ್ಷೆಗಳನ್ನು ಧಿಕ್ಕರಿಸಿ, 232 ಅಂಕಿಗಳನ್ನು ತಲುಪಿತು, ಬಿಜೆಪಿಗೆ ಬಹುಮತ ತಲುಪುವುದನ್ನು ತಡೆಯಿತು.

ಫಲಿತಾಂಶಗಳು ಸ್ಪಷ್ಟವಾಗುತ್ತಿದ್ದಂತೆ ಮಾಧ್ಯಮಗಳನ್ನು ಉದ್ದೇಶಿಸಿ ಮಾತನಾಡಿದ ಕಾಂಗ್ರೆಸ್ ಅಧ್ಯಕ್ಷ ಖರ್ಗೆ, "ರಹುಲ್ ಗಾಂಧಿಯವರ ಭಾರತ್ ಜೋಡೋ ಯಾತ್ರೆಯು ಪಕ್ಷದ ಪ್ರಚಾರದ ಅಡಿಪಾಯವನ್ನು ರೂಪಿಸಿತು" ಎಂದು ಹೇಳಿದರು.

ಮತ್ತೊಂದೆಡೆ, ಪ್ರಧಾನಿ ಸೇರಿದಂತೆ ಬಿಜೆಪಿ ನಾಯಕರ ಮಾತಿನ ದಾಳಿಯನ್ನು ಎದುರಿಸುವಲ್ಲಿ ಪ್ರಿಯಾಂಕಾ ಗಾಂಧಿ ಪ್ರಮುಖ ಪಾತ್ರ ವಹಿಸಿದರು. ಅವರು ಉತ್ತರ ಪ್ರದೇಶದ ಎರಡು ಪ್ರತಿಷ್ಠಿತ ಸ್ಥಾನಗಳಾದ ಅಮೇಥಿ ಮತ್ತು ರಾಯ್ಬರೇಲಿ ಪಕ್ಷದ ಪ್ರಚಾರವನ್ನು ಮುನ್ನಡೆಸಿದರು. ಕಳೆದ ಬಾರಿ ಬಿಜೆಪಿಯ ಸ್ಮೃತಿ ಇರಾನಿ ವಿರುದ್ಧ ಸೋತಿದ್ದ ಅಮೇಥಿಯನ್ನು ಕಾಂಗ್ರೆಸ್‌ನ ಕೆಎಲ್ ಶರ್ಮಾ ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದರೆ. ರಾಹುಲ್ ಗಾಂಧಿ ರಾಯ್‌ಬರೇಲಿಯನ್ನು 3.9 ಲಕ್ಷ ಮತಗಳ ಅಂತರದಿಂದ ಗೆದ್ದರು.

ನಿನ್ನೆ ನಡೆದ ಪತ್ರಿಕಾಗೋಷ್ಠಿಯಲ್ಲಿ ರಾಹುಲ್ ಗಾಂಧಿಯವರು, ತಮ್ಮ ಸಹೋದರಿಯ ಪಾತ್ರವನ್ನು ಪ್ರಸ್ತಾಪಿಸಿದರು. ಉತ್ತರ ಪ್ರದೇಶದಲ್ಲಿ ನನ್ನ ಸಹೋದರಿ ಪ್ರಿಯಾಂಕಾಗೆ ದೊಡ್ಡ ಪಾತ್ರವಿದೆ ಎಂದು ಅವರು ಹೇಳಿದರು.

### ಜಿಲ್ಲಾ ಮಟ್ಟದ ಬ್ಯಾಂಕರ್ಸ್ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿ.ಪಂ ಸಿಇಓ ಸ್ವರೂಪ ಟಿ.ಕೆ

# ಕಾಲಮಿತಿಯಲ್ಲಿ ಪೂರ್ಣ ಪ್ರಗತಿ ಸಾಧಿಸಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಪ್ರಸಕ್ತ ಸಾಲಿಗೆ ಜಿಲ್ಲೆಯ ವಾರ್ಷಿಕ ವಿತ್ತೀಯ ಯೋಜನಾ ಗುರಿಯನ್ನು ರೂ. 20,053.53 ಕೋಟಿ ನಿಗದಿಪಡಿಸಿದ್ದು, ಜಿಲ್ಲೆಯ ಎಲ್ಲ ಬ್ಯಾಂಕುಗಳ ಪ್ರತಿ ಶಾಖೆಗೆ ಗುರಿ ನಿಗದಿಪಡಿಸಲಾಗಿದೆ. ಕಾಲಮಿತಿಯಲ್ಲಿ ಪೂರ್ಣ ಪ್ರಗತಿ ಸಾಧಿಸಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ ಹೇಳಿದರು.



ಅವರು ಬುಧವಾರ ಬೆಳಿಗ್ಗೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಮಾರ್ಚ್ 2024ರ ಅಂತ್ಯಕ್ಕೆ ಪ್ರಗತಿ ಸಾಧನೆ ಕುರಿತು ಮತ್ತು ಪ್ರಸಕ್ತ ಸಾಲಿನ ವಾರ್ಷಿಕ ವಿತ್ತೀಯ ಯೋಜನೆ ಬಿಡುಗಡೆ ನಿಮಿತ್ತ ಜಿಲ್ಲಾ ಮಟ್ಟದ ಬ್ಯಾಂಕರ್ಸ್ ಪ್ರಗತಿ ಪರಿಶೀಲನಾ ಮತ್ತು ಜಿಲ್ಲಾ ಬ್ಯಾಂಕರ್ಸ್ ಸಲಹಾ ಸಮಿತಿ ಸಭೆ ಜರುಗಿಸಿ, ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಜಿಲ್ಲಾ ಮಟ್ಟದ ಬ್ಯಾಂಕರ್ಸ್ ಸಮನ್ವಯ ಸಮಿತಿ ಮುಖ್ಯವಾಗಿದೆ. ಇಲಾಖೆಗಳ ಮತ್ತು ಬ್ಯಾಂಕರ್ಸ್‌ಗಳ ಮಧ್ಯ ಸಮನ್ವಯ ಮೂಡಿಸಲು ಈ ಸಮಿತಿ ಸಹಾಯಕವಾಗಿದೆ. ಸರಕಾರದ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವಲ್ಲಿ ಬ್ಯಾಂಕಗಳು ಸಹಕಾರ ನೀಡಿ, ಕೈಜೊಡಿಸಬೇಕೆಂದು ಅವರು ತಿಳಿಸಿದರು.

ಜಿಲ್ಲೆಯ ಪ್ರಸಕ್ತ ವಾರ್ಷಿಕ ವಿತ್ತೀಯ ಯೋಜನೆಯಲ್ಲಿ ಬೆಳೆಸಾಲ ರೂ. 2003.74 ಕೋಟಿ, ಕೃಷಿ ಅವಧಿ ಸಾಲ ರೂ.1,223.11 ಕೋಟಿ ಸೂಕ್ಷ್ಮ ಮತ್ತು ಸಣ್ಣ ಹಾಗೂ ಮಧ್ಯಮ ಉದ್ಯಮಗಳಿಗೆ ಸಾಲ ರೂ. 8,096.24, ಇತರೆ ಆಧ್ಯತಾ ವಲಯ ರೂ.774.50 ಕೋಟಿ ಮತ್ತು ಆಧ್ಯತಾ ರಹಿತ ವಲಯಕ್ಕೆ ಸಾಲ ರೂ.7,341.77 ಕೋಟಿ ಸೇರಿದಂತೆ ಒಟ್ಟು ರೂ.20,053.53 ಕೋಟಿಗಳ ಸಾಲ ವಿತರಣೆಯ ಗುರಿ ಹೊಂದಲಾಗಿದೆ ಎಂದು ಸಿಇಓ ಸ್ವರೂಪ ಟಿ.ಕೆ ತಿಳಿಸಿದರು.

ಜಿಲ್ಲಾ ಅಗ್ರಣೀಯ ಬ್ಯಾಂಕ್‌ನ ಜಿಲ್ಲಾ ವ್ಯವಸ್ಥಾಪಕ ಪ್ರಭುದೇವ ಎನ್.ಜಿ ಪ್ರಸ್ತಾವಿಕವಾಗಿ ಮಾತನಾಡಿ, ಎಪ್ರಿಲ್ 1, 2023ರಿಂದ ಮಾರ್ಚ್ 2024ರ ಅಂತ್ಯದವರೆಗೆ ನಿಗದಿತ ಗುರಿಯಾಗಿದ್ದ ರೂ. 14,580.46 ಕೋಟಿಗಳಿಗೆ ರೂ. 19,560.73 ಕೋಟಿ ಸಾಲ ವಿತರಿಸಿ ಶೇ. 134ರಷ್ಟು ಹೆಚ್ಚುವರಿ ಗುರಿ ಸಾಧಿಸಲಾಗಿದೆ ಎಂದು ತಿಳಿಸಿದರು.

ನಬಾರ್ಡ್ ಬ್ಯಾಂಕ್‌ನ ಡಿಡಿಎಂ ಮಯೂರ ಕಾಂಬಳೆ ಮಾತನಾಡಿದರು. ಬ್ಯಾಂಕ್ ಆಫ್ ಬರೋಡಾದ ಪ್ರಾದೇಶಿಕ ವ್ಯವಸ್ಥಾಪಕ ಪ್ರಶಾಂತ ಸ್ವಾಗತಿಸಿದರು. ಸಭೆಯಲ್ಲಿ ಜಿಲ್ಲೆಯ ವಿವಿಧ ಬ್ಯಾಂಕ್‌ಗಳ ಮುಖ್ಯಸ್ಥರು, ಪ್ರತಿನಿಧಿಗಳು, ವಿವಿಧ ಸರಕಾರಿ ಇಲಾಖೆಯ ಅಧಿಕಾರಿಗಳ ಭಾಗವಹಿಸಿದ್ದರು.

ಆರ್.ಬಿ.ಐ ಅಧಿಕಾರಿ ಅರುಣಕುಮಾರ ಪಿ. ಮಾತನಾಡಿ, ಆರ್.ಬಿ.ಐನ ಮಾರ್ಗಸೂಚಿ ಮತ್ತು ನೀತಿಯನ್ನು ವಿವರಿಸಿದರು. ಗ್ರಾಹಕರಿಗೆ ಅನೌಪಚಾರಿಕ ಮೂಲಗಳಿಂದ ಪಡೆದಂತ ಸಾಲಗಳಿಂದ ಉಂಟಾಗುವ ತೊಂದರೆಗಳ ಬಗ್ಗೆ ವಿವರಿಸಿ, ಔಪಚಾರಿಕ ಮೂಲಗಳಿಂದ ಸಾಲ ಪಡೆಯಲು ಗ್ರಾಹಕರನ್ನು ಪ್ರೋತ್ಸಾಹಿಸಬೇಕೆಂದು ಬ್ಯಾಂಕಿನ ಅಧಿಕಾರಿಗಳಿಗೆ ಸಲಹೆ ನೀಡಿದರು. ಯುಪಿಐನಿಂದ ಹಣಕಾಸಿನ ವ್ಯವಹಾರಗಳನ್ನು ತುಂಬಾ ಎಚ್ಚರಿಕೆಯಿಂದ ನಡೆಸಲು ಹಾಗೂ ಸೈಬರ್ ವಂಚನೆ, ಸೈಬರ್ ಅಪರಾಧಗಳನ್ನು ವರದಿ ಮಾಡಲು ಸ್ಥಾಪಿಸಿರುವ ಸಹಾಯವಾಣಿ 1930 ಬಗ್ಗೆ ಹೆಚ್ಚಿನ ಪ್ರಸಾರ ಮಾಡಲು ಅವರು ತಿಳಿಸಿದರು.

# ಪ್ರತಿಯೊಬ್ಬರೂ ಗಿಡಮರಗಳನ್ನು ಬೆಳೆಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಲಿಟಲ್ ಹಾರ್ಟ್ಸ್ ಇಂಟರ್‌ನ್ಯಾಶನಲ್ ಸ್ಕೂಲ್‌ನಲ್ಲಿ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮವನ್ನು ಆಚರಿಸಲಾಯಿತು.



ಶಾಲೆಯ ವಿದ್ಯಾರ್ಥಿಗಳು ಪ್ರಭಾತಪೇರಿ ಮಾಡುವ ಮೂಲಕ ಪರಿಸರ ಜಾಗೃತಿ ಮೂಡಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಸಂಸ್ಥಾಪಕ ರಾಮೇಶ್ವರ ಶಿರಹಟ್ಟಿ ವಹಿಸಿ ಮಾತನಾಡಿ, ಈ ಭೂಮಿಯ ಮೇಲೆ ಸಕಲ ಜೀವರಾಶಿಗಳು ಬದುಕಬೇಕಾದರೆ ಉತ್ತಮವಾದ ಪರಿಸರ ಇರಬೇಕು. ಭೂಮಿಯನ್ನು ಹಸಿರಾಗಿಸಲು ಪ್ರತಿಯೊಬ್ಬರೂ ಗಿಡಮರಗಳನ್ನು ಬೆಳೆಸಬೇಕು ಎಂದು ಹೇಳಿದರು.

ಮುಖ್ಯೋಪಾಧ್ಯಾಯ ಗಂಗಾಧರ ಶಿರಹಟ್ಟಿ ಮಾತನಾಡಿ, ನಮ್ಮೆಲ್ಲರ ಜೀವನವು ಉತ್ತಮವಾಗಿರಬೇಕಾದರೆ ನಾವು ಉತ್ತಮವಾದ ಪರಿಸರವನ್ನು ನಿರ್ಮಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಿಖತ್ ಭದ್ರಾಪುರ, ಪೂರ್ಣಿಮಾ ಕೊಡ್ಲಿ, ಮಾರುತಿ ಮ್ಯಾಗೇರಿ, ಸಂಜೀವ ಮೇಹರವಾಡೆ, ಸುವರ್ಣ ಹಡಗಲಿ, ಮೇರಿ ಅಂಥೋನಿ, ಸೀಮಾ ಪಾಟೀಲ, ಪ್ರೀತಿ ಅಖಳಂಡಸ್ವಾಮಿಮಠ, ದಾನಮ್ಮ ಜವಳಿ, ವಿಜಯಲಕ್ಷ್ಮೀ ಪಾಟೀಲ, ವಿಜಯಲಕ್ಷ್ಮೀ ಹಣಗಿ, ಭಾರತಿ ದೇಸಾಯಿ, ಕಾವೇರಿ ಗದಗ, ಅನುಷಾ ಹಿರೇಮಠ, ರೇಷ್ಮಾ ಪಟೇಲ್, ಅಕ್ಷತಾ ಕೋರಿಶೆಟ್ಟರ್, ಲತಾ ಬಸಾಪುರ, ಆಶಾಬೇಗಂ ನದಾಫ್, ಗೀತಾ ಮುಗಳಿ, ದೀಪಾ ದೊಡ್ಡಮನಿ ಮುಂತಾದವರಿದ್ದರು.

# ತಾಪಮಾನ ತಡೆಯಲು ಸಸಿ ನೆಡಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಇತ್ತೀಚಿನ ದಿನಗಳಲ್ಲಿ ತಾಪಮಾನ ವಿಪರೀತವಾಗಿ ಏರುತ್ತಿದ್ದು, ಜನ ಸಂಕಷ್ಟ ಅನುಭವಿಸುವಂತಾಗಿದೆ. ಹೆಚ್ಚುತ್ತಿರುವ ತಾಪಮಾನವನ್ನು ತಡೆಯಲು ಇರುವ ಏಕೈಕ ಮಾರ್ಗವೆಂದರೆ ಸಸಿಗಳನ್ನು ನೆಟ್ಟು ಪೋಷಿಸುವುದು ಎಂದು ಜಂಟಿ ಕೃಷಿ ನಿರ್ದೇಶಕರಾದ ತಾರಾಮಣಿ ಜಿ.ಎಚ್ ಅಭಿಪ್ರಾಯಪಟ್ಟರು.



ಅವರು ಬುಧವಾರ ರಿವಾರ್ಡ್ ಯೋಜನೆಯಡಿ ತಾಲೂಕಿನ ಮುಳಗುಂದದ ಮೊರಾರ್ಜಿ ದೇಸಾಯಿ ಉನ್ನತೀಕರಿಸಿದ ಶಾಲೆಯಲ್ಲಿ ಏರ್ಪಡಿಸಲಾಗಿದ್ದ ವಿಶ್ವ ಪರಿಸರ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದರು.

ರಿವಾರ್ಡ್ ಯೋಜನೆಯ ಅರಣ್ಯ ಹಾಗೂ ತೋಟಗಾರಿಕಾ ಘಟಕದ ಅಡಿಯಲ್ಲಿ ಸಸಿಗಳನ್ನು ನೆಡುವ ಮೂಲಕ ಸಮಗ್ರ ಕೃಷಿ ಪ್ರೋತ್ಸಾಹಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಮುಖ್ಯೋಪಾಧ್ಯಾಯರಾದ ಎಚ್. ಆರ್ ಸಕ್ಕರಿ ಮಾತನಾಡಿ, ಶಾಲೆಗಳಲ್ಲಿ ಈ ರೀತಿಯ ಪರಿಸರ ಸಂಬಂಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಮಕ್ಕಳಲ್ಲಿ ಪರಿಸರ ಕಾಳಜಿ ಮೂಡಿಸಿದರೆ ಮುಂದಿನ ಪೀಳಿಗೆಗೆ ಉತ್ತಮ ಸಂದೇಶ ನೀಡಿದಂತಾಗುತ್ತದೆ. ನಮ್ಮ ಶಾಲೆಯಲ್ಲಿ ಪ್ರತಿ ಮಗುವಿಗೂ ಪರಿಸರ ಕಾಳಜಿ ಮೂಡಿಸುವ ಪ್ರಾಯೋಗಿಕ ಪಾಠ ಮಾಡುತ್ತೇವೆ ಎಂದರು.

ಕೃಷಿ ಅಧಿಕಾರಿ ಎಫ್.ಸಿ. ಗುರಿಕಾರ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಬಿ.ಕೆ. ಡಬಾಲಿ, ವಿಶಾಲ ಚೌದರಿ, ಜೆ.ಡಿ. ಶಿರಹಟ್ಟಿ, ಆರ್.ಎಂ. ಮಳಗಾವಿ, ಮಂಗಳಾ ಸೇರಿದಂತೆ ಶಾಲಾ ಸಿಬ್ಬಂದಿ ಹಾಗು ರಿವಾರ್ಡ್ ಯೋಜನೆಯ ಸಿಬ್ಬಂದಿ ಹಾಜರಿದ್ದರು.

# ಸ್ಮೃತಿ ಇರಾನಿ, ಅಜಯ್ ಮಿಶ್ರಾ ಸೇರಿ 16 ಹಾಲಿ ಕೇಂದ್ರ ಸಚಿವರಿಗೆ ಸೋಲುಣಿಸಿದ ಮತದಾರರು

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಲೋಕಸಭೆ ಚುನಾವಣೆಯ ಸಂಪೂರ್ಣ ಫಲಿತಾಂಶ ಪ್ರಕಟವಾಗಿದ್ದು, ಈ ಬಾರಿ ಬಿಜೆಪಿ ನೇತೃತ್ವದ ಎನ್‌ಡಿಎಗೆ ದೊಡ್ಡ ಹೊಡೆತ ಬಿದ್ದಿದೆ. ಈ ಬಾರಿ ಕೇಂದ್ರದ ಹಾಲಿ 16 ಸಚಿವರು ಸೋಲನ್ನು ಕಂಡಿದ್ದಾರೆ.



ಅಮೇಥಿಯಲ್ಲಿ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವೆ ಸ್ಮೃತಿ ಇರಾನಿ ಕಾಂಗ್ರೆಸ್ ಅಭ್ಯರ್ಥಿ ಕಿಶೋರಿ ಲಾಲ್ ವಿರುದ್ಧ ಸೋಲನ್ನು ಅನುಭವಿಸಿದ್ದಾರೆ. ಮೋಹನ್‌ಲಾಲ್‌ಗಂಜ್ ಕ್ಷೇತ್ರದಲ್ಲಿ ಕೇಂದ್ರ ವಸತಿ ಖಾತೆ ರಾಜ್ಯ ಸಚಿವ ಕೌಶಲ್ ಕಿಶೋರ್ ಅವರು ಸಮಾಜವಾದಿ ಪಕ್ಷದ ಆರ್.ಕೆ. ಚೌಧರಿ ವಿರುದ್ಧ ಸೋಲನ್ನು ಕಂಡುಕೊಂಡಿದ್ದಾರೆ.

ಚಂದೌಲಿ ಕ್ಷೇತ್ರದಲ್ಲಿ ಕೈಗಾರಿಕೆ ಖಾತೆ ಸಚಿವ ಮಹೇಂದ್ರ ನಾಥ್ ಪಾಂಡೆ ಸಮಾಜವಾದಿ ಪಕ್ಷ ಎಸ್‌ಪಿಯ ಬೀರೇಂದ್ರ ಸಿಂಗ್ ವಿರುದ್ಧ ಸೋಲನ್ನು ಅನುಭವಿಸಿದ್ದಾರೆ.

ತಿರುವನಂತಪುರಂ ಕ್ಷೇತ್ರದಲ್ಲಿ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಖಾತೆ ಹಾಲಿ ಸಚಿವರಾದ ರಾಜೀವ್ ಚಂದ್ರಶೇಖರ್ ಕಾಂಗ್ರೆಸ್ ನಾಯಕ ಶಶಿತರೂರ್ ವಿರುದ್ಧ ಸೋಲನ್ನು ಅನುಭವಿಸಿದ್ದಾರೆ. ಲಖಿಂಪುರ ಖೇರಿ ಕ್ಷೇತ್ರದಲ್ಲಿ ಗೃಹ ಖಾತೆ ರಾಜ್ಯ ಸಚಿವ ಅಜಯ್ ಮಿಶ್ರಾ ತೇನಿ ಸಮಾಜವಾದಿ ಪಕ್ಷದ ಉತ್ಕರ್ಷ್ ವರ್ಮಾ ವಿರುದ್ಧ ಸೋಲನ್ನು ಅನುಭವಿಸಿದ್ದಾರೆ.

ಬಂಕುರಾ ಕ್ಷೇತ್ರದಲ್ಲಿ ಬಿಜೆಪಿ ನಾಯಕ, ಕೇಂದ್ರ ಶಿಕ್ಷಣ ಖಾತೆ ರಾಜ್ಯ ಸಚಿವ ಸುಭಾಸ್ ಸರ್ಕಾರ್, ತೃಣಮೂಲ ಕಾಂಗ್ರೆಸ್‌ನ ಅಭ್ಯರ್ಥಿ ಅರೂಪ್ ಚಕ್ರವರ್ತಿ ವಿರುದ್ಧ ಸೋಲನ್ನು ಅನುಭವಿಸಿದ್ದಾರೆ. ಕುಂತಿ ಲೋಕಸಭೆ ಕ್ಷೇತ್ರದಲ್ಲಿ ಕೇಂದ್ರ ರೈತ ಮತ್ತು ಕೃಷಿ ಕಲ್ಯಾಣ ಖಾತೆ ಸಚಿವ ಅರ್ಜುನ್ ಮುಂಡಾ ಕಾಂಗ್ರೆಸ್‌ನ ಕಾಳಿಚರಣ್ ಮುಂಡಾ ವಿರುದ್ಧ ಸೋತಿದ್ದಾರೆ.

ಬೀದರ್‌ನಲ್ಲಿ ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಖಾತೆ ರಾಜ್ಯ ಸಚಿವ ಭಗವಂತ ಖೂಬಾ ಅವರನ್ನು ಕಾಂಗ್ರೆಸ್ ಅಭ್ಯರ್ಥಿ ಸಾಗರ್ ಖಂಡ್ರೆ ಸೋಲಿಸಿದ್ದಾರೆ. ರಾಜಸ್ಥಾನದ ಬಾರ್ಮರ್ ಕ್ಷೇತ್ರದಲ್ಲಿ ಕಾಂಗ್ರೆಸ್‌ನ ರಾಮ್ ಬೆನಿವಾಲ್ ವಿರುದ್ಧ ಕೃಷಿ ಮತ್ತು ರೈತ ಕಲ್ಯಾಣ ಖಾತೆ ರಾಜ್ಯ ಸಚಿವ ಕೈಲಾಶ್ ಚೌಧರಿ ಸೋಲನ್ನು ಕಂಡಿದ್ದು, ಮೂರನೇ ಸ್ಥಾನಕ್ಕೆ ತಲ್ಲಲ್ಪಟ್ಟಿದ್ದಾರೆ.

ಕೂಚ್ ಬೆಹಾರ್ ಕ್ಷೇತ್ರದಲ್ಲಿ ಯುವ ವ್ಯವಹಾರಗಳು ಮತ್ತು ಕ್ರೀಡಾ ಖಾತೆ ರಾಜ್ಯ ಸಚಿವ ನಿಸಿತ್ ಪ್ರಮಾಣಿಕ್ ಟಿಎಂಸಿಯ ಜಗದೀಶ್ ಚಂದ್ರ ಬಸುನಿಯಾ ವಿರುದ್ಧ ಸೋಲನ್ನು ಕಂಡಿದ್ದಾರೆ. ಮುಜಾಫರ್ ನಗರದಲ್ಲಿ ಸಮಾಜವಾದಿ ಪಕ್ಷದ ಹರೇಂದ್ರ ಸಿಂಗ್ ಮಲಿಕ್ ವಿರುದ್ಧ ಕೇಂದ್ರ ಸಚಿವ ಸಂಜೀವ್ ಬಲ್ಯಾನ್ ಸೋಲನ್ನು ಅನುಭವಿಸಿದ್ದಾರೆ. ಕೇಂದ್ರ ವಿದೇಶಾಂಗ ಮತ್ತು ಸಂಸದೀಯ ವ್ಯವಹಾರಗಳ ರಾಜ್ಯ ಸಚಿವ ವಿ ಮುರಳೀಧರನ್ ಅವರು ಕೇರಳದ ತಿರುವನಂತಪುರಂನಲ್ಲಿ ಸೋಲು ಕಂಡಿದ್ದಾರೆ.

ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ ರಾಜ್ಯ ಸಚಿವ ಎಲ್ ಮುರುಗನ್ ಅವರು ತಮಿಳುನಾಡಿನ ನೀಲಗಿರಿಯಲ್ಲಿ ಡಿಎಂಕೆಯ ಎ ರಾಜಾ ವಿರುದ್ಧ 2,40,585 ಮತಗಳ ಗಣನೀಯ ಅಂತರದಿಂದ ಸೋತಿದ್ದಾರೆ.

# ಉಚ್ಚ ನ್ಯಾಯಾಲಯ ಪೀಠದಲ್ಲಿ ಪರಿಸರ ದಿನಾಚರಣೆ


■ವಿಜಯಸಾಕ್ಷಿ ಸುದ್ದಿ, ಧಾರವಾಡ

ವಿಶ್ವ ಪರಿಸರ ದಿನಾಚರಣೆಯ ಹಿನ್ನೆಲೆಯಲ್ಲಿ ಬುಧವಾರ ಕರ್ನಾಟಕ ಉಚ್ಚ ನ್ಯಾಯಾಲಯ ಧಾರವಾಡ ಪೀಠದಲ್ಲಿ ವಿವಿಧ ವಿಧದ ಸಸಿಗಳನ್ನು ನೆಡುವ ಕಾರ್ಯಕ್ರಮವನ್ನು ಉಚ್ಚ ನ್ಯಾಯಾಲಯದ ಕಾನೂನು ಸೇವಾ ಸಮಿತಿ, ಉಚ್ಚನ್ಯಾಯಾಲಯದ ವಕೀಲರ ಸಂಘ, ಅರಣ್ಯ ಇಲಾಖೆ ಮತ್ತು ತೋಟಗಾರಿಕಾ ಇಲಾಖೆ ಇವರ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಅಂಗವಾಗಿ ಉಚ್ಚನ್ಯಾಯಾಲಯದ ಆವರಣದಲ್ಲಿ ಧಾರವಾಡ ಪೀಠದ ಹಿರಿಯ ನ್ಯಾಯಮೂರ್ತಿಗಳಾದ ಎಸ್.ಜಿ. ಪಂಡಿತ ಅವರು ಸಸಿಗಳನ್ನು ನೆಡುವುದರ ಮೂಲಕ ಚಾಲನೆ ನೀಡಿದರು. ಅವರೊಂದಿಗೆ ಸಹನ್ಯಾಯಮೂರ್ತಿಗಳು ಹಾಗೂ ವಕೀಲರ ಸಂಘದ ಅಧ್ಯಕ್ಷರು, ಉಪಾಧ್ಯಕ್ಷರು, ಕಾರ್ಯಕಾರಿ ಸಮತಿ ಸದಸ್ಯರು, ಅಡಿಷನಲ್ ಅಡ್ವೋಕೆಟ್ ಜನರಲ್, ಅಡಿಷನಲ್ ಸಾಲಿಟರ್ ಜನರಲ್, ಅರಣ್ಯ ಇಲಾಖೆ ಮತ್ತು ತೋಟಗಾರಿಕಾ ಇಲಾಖೆಯ ಹಿರಿಯ ಅಧಿಕಾರಿಗಳು ಭಾಗವಹಿಸಿ ವಿವಿಧ ಪ್ರಭೇದದ ಸುಮಾರು 100 ಸಸಿಗಳನ್ನು ನೆಟ್ಟರು.

# ನಾವು ಎನ್‌ಡಿಎ ಜೊತೆಗಿದ್ದೇವೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ಕೇಂದ್ರದಲ್ಲಿ ಸರಕಾರ ರಚನೆಗೆ ಬಿಜೆಪಿ ನೇತೃತ್ವದ ಎನ್‌ಡಿಎಗೆ ತಮ್ಮ ಬೆಂಬಲವನ್ನು ಟಿಡಿಪಿ ಮುಖ್ಯಸ್ಥ ಎನ್ ಚಂದ್ರಬಾಬು ನಾಯ್ಡು ಪುನರುಚ್ಚರಿಸಿದ್ದಾರೆ.

ಟಿಡಿಪಿ ಮುಖ್ಯಸ್ಥ ಎನ್ ಚಂದ್ರಬಾಬು ನಾಯ್ಡು ಈ ಬಗೆಗಿನ ಮಾಧ್ಯಮ ಪ್ರಶ್ನೆಗೆ ಉತ್ತರಿಸಿದ್ದು, ನಿಮಗೆ ಯಾವಾಗಲೂ ಸುದ್ದಿ ಬೇಕು. ನನಗೆ ಅನುಭವ ಇದೆ. ನಾನು ಈ ದೇಶದಲ್ಲಿ ಹಲವಾರು ರಾಜಕೀಯ ಬದಲಾವಣೆಗಳನ್ನು ನೋಡಿದ್ದೇನೆ. ನಾವು ಎನ್‌ಡಿಎಯಲ್ಲಿದ್ದೇವೆ, ನಾನು ಎನ್‌ಡಿಎ ಸಭೆಗೆ ಹೋಗುತ್ತಿದ್ದೇನೆ ಎಂದು ಹೇಳಿದ್ದಾರೆ.

ನಾನು ದೆಹಲಿಗೆ ಹೋಗುತ್ತಿದ್ದೇನೆ. ಮತದಾರರ ಬೆಂಬಲ ಖುಷಿ ನೀಡಿದೆ. ರಾಜಕಾರಣದಲ್ಲಿ ಏಳು ಬೀಳುಗಳು ಸಹಜ. ಇದೊಂದು ಐತಿಹಾಸಿಕ ಚುನಾವಣೆ. ಟಿಡಿಪಿ ಇಂದು ರಾಜ್ಯದಲ್ಲಿ ಅಧಿಕಾರಕ್ಕೆ ಬರಲು ಪಕ್ಷದ ಕಾರ್ಯಕರ್ತರ ಶ್ರಮವಿದೆ. ಪ್ರಜಾಪ್ರಭುತ್ವದ ರಕ್ಷಣೆಗಾಗಿ ಐದು ವರ್ಷಗಳ ಕಾಲ ಹೋರಾಟ ನಡಸಿದ್ದು, ಇದೀಗ ಯಶಸ್ವಿಯಾಗಿದ್ದಾರೆ ಎಂದು ಹೇಳಿದ್ದಾರೆ.

ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟವು 293 ಸ್ಥಾನಗಳನ್ನು, ಕಾಂಗ್ರೆಸ್ ನೇತೃತ್ವದ ಇಂಡಿಯಾ ಮೈತ್ರಿಕೂಟವು 233 ಸ್ಥಾನಗಳನ್ನು ಮತ್ತು ಇತರರು 17 ಸ್ಥಾನಗಳಲ್ಲಿ ಗೆಲುವನ್ನು ಸಾಧಿಸಿದ್ದಾರೆ. ಬಿಜೆಪಿಗೆ ಸಂಪೂರ್ಣ ಬಹುಮತ ಸಿಗದ ಕಾರಣ ಟಿಡಿಪಿ ಮತ್ತು ಜೆಡಿಯು ಕಿಂಗ್ ಮೇಕರ್ ಆಗಿದೆ. ಈ ಎರಡೂ ಪಕ್ಷಗಳು ಚುನಾವಣೆ ಪೂರ್ವದಲ್ಲೇ ಎನ್‌ಡಿಎ ಜೊತೆ ಮೈತ್ರಿಯನ್ನು ಮಾಡಿಕೊಂಡಿದ್ದವು. ಆದರೆ ಫಲಿತಾಂಶದ ಬಳಿಕ ಇಂಡಿಯಾ ಮೈತ್ರಿಕೂಟದ ನಾಯಕರು ನಾಯ್ಡು ಮತ್ತು ನಿತೀಶ್ ಅವರನ್ನು ತಮ್ಮತ್ತ ಸೆಳೆಯಲು ಪ್ರಯತ್ನಿಸಿದ್ದಾರೆ ಎಂದು ಹೇಳಲಾಗಿತ್ತು. ಆದರೆ ಈ ಎಲ್ಲಾ ಬೆಳವಣಿಗೆಗಳನ್ನು ಚಂದ್ರಬಾಬು ನಾಯ್ಡು ನಿರಾಕರಿಸಿದ್ದು, ಎನ್‌ಡಿಎ ಮೈತ್ರಿಕೂಟಕ್ಕೆ ಬೆಂಬಲವನ್ನು ಪುನರುಚ್ಚರಿಸಿದ್ದಾರೆ.

### ಉತ್ತರಾಖಂಡಕ್ಕೆ ತೆರಳಿದ ಸಚಿವ ಕೃಷ್ಣ ಬೈರೇಗೌಡ

## ಚಾರಣಕ್ಕೆ ಹೋಗಿದ್ದ ನಾಲ್ವರು ಸಾವು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಚಾರಣಕ್ಕೆಂದು ತೆರಳಿದ್ದ ಕರ್ನಾಟಕದ ನಾಲ್ವರು ಮೃತಪಟ್ಟಿರುವ ಬಗ್ಗೆ ವರದಿಯಾಗಿದೆ. ಈ ಹಿನ್ನೆಲೆ ತಂಡದ ನೆರವಿಗಾಗಿ ಕಂದಾಯ ಸಚಿವ ಕೃಷ್ಣ ಬೈರೇಗೌಡ ಉತ್ತರಾಖಂಡಕ್ಕೆ ಪ್ರಯಾಣ ಬೆಳೆಸಿದ್ದಾರೆ.

ಘಟನೆಯ ಬಗ್ಗೆ ಮಾಹಿತಿ ನೀಡಿರುವ ಸಚಿವ ಕೃಷ್ಣ ಬೈರೇಗೌಡ, "ಕರ್ನಾಟಕದ 20 ಜನ ಚಾರಣಿಗರು ಹಾಗೂ ಓರ್ವ ಗೈಡ್ ಒಳಗೊಂಡ ತಂಡ ಉತ್ತರಾಖಂಡದ ಎತ್ತರದ ಶಾಸ್ತ್ರತಾಳ್ ಮಯಳಿ ಎಂಬ ಪ್ರದೇಶದಲ್ಲಿ ಮಂಗಳವಾರ ಬೆಳಗ್ಗೆ ಚಾರಣ ಆರಂಭಿಸಿದ್ದರು. ಗಮ್ಯಸ್ಥಾನ ತಲುಪಿದ ತಂಡ ಮತ್ತೆ ಶಿಬಿರಕ್ಕೆ ಹಿಂತಿರುಗಲು ಯತ್ನಿಸಿದೆ. ಆದರೆ, ಹಿಂತಿರುಗುವ ಮಾರ್ಗ ಮಧ್ಯೆ ನಿನ್ನೆ ಮಧ್ಯಾಹ್ನ 2 ಗಂಟೆಗೆ ಹಿಮಗಾಳಿಯಿಂದಾಗಿ ಹವಾಮಾನ ಸಂಪೂರ್ಣ ಹದಗೆಟ್ಟಿದೆ. ಹೀಗಾಗಿ ಎಲ್ಲಾ ಚಾರಣಿಗರು ಅದೇ ಸ್ಥಳದಲ್ಲಿ ಅಪಾಯಕ್ಕೆ ಸಿಲುಕಿದ್ದರು" ಎಂದು ತಿಳಿಸಿದ್ದಾರೆ.

ಚಾರಣಕ್ಕೆಂದು ತೆರಳಿದ್ದ ಕರ್ನಾಟಕದ ನಾಲ್ವರು ಮೃತಪಟ್ಟಿರುವ ಬಗ್ಗೆ ವರದಿಯಾಗಿದೆ. ಈ ಹಿನ್ನೆಲೆ ತಂಡದ ನೆರವಿಗಾಗಿ ಕಂದಾಯ ಸಚಿವ ಕೃಷ್ಣ ಬೈರೇಗೌಡ ಉತ್ತರಾಖಂಡಕ್ಕೆ ಪ್ರಯಾಣ ಬೆಳೆಸಿದ್ದಾರೆ.

ಘಟನೆಯ ಬಗ್ಗೆ ಮಾಹಿತಿ ನೀಡಿರುವ ಸಚಿವ ಕೃಷ್ಣ ಬೈರೇಗೌಡ, "ಕರ್ನಾಟಕದ 20 ಜನ ಚಾರಣಿಗರು ಹಾಗೂ ಓರ್ವ ಗೈಡ್ ಒಳಗೊಂಡ ತಂಡ ಉತ್ತರಾಖಂಡದ ಎತ್ತರದ ಶಾಸ್ತ್ರತಾಳ್ ಮಯಳಿ ಎಂಬ ಪ್ರದೇಶದಲ್ಲಿ ಮಂಗಳವಾರ ಬೆಳಗ್ಗೆ ಚಾರಣ ಆರಂಭಿಸಿದ್ದರು.

## ವಿವಿಧ ಪ್ರದೇಶಗಳಲ್ಲಿ 1001 ಸಸಿ ನೆಡುವ ಅಭಿಯಾನಕ್ಕೆ ಚಾಲನೆ

# ಸಾರ್ವಜನಿಕರು ಪರಿಸರ ಸಂರಕ್ಷಣೆಗೆ ಮುಂದಾಗಲಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಸಾರ್ವಜನಿಕರು ಪ್ಲಾಸ್ಟಿಕ್ ಬಳಕೆಯನ್ನು ಕಡೆಗಣಿಸಿ ಪರಿಸರ ಸಂರಕ್ಷಣೆಗೆ ಮುಂದಾಗಬೇಕು ಎಂದು 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಪರಮೇಶ್ವರ ಪ್ರಸನ್ನ ಬಿ. ಹೇಳಿದರು.

ಬುಧವಾರ ವಿದ್ಯಾನಗರದ ಹೊಸ ಕೋರ್ಟ್ ಆವರಣದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ ಹುಬ್ಬಳ್ಳಿ, ಅರಣ್ಯ ಇಲಾಖೆ ಮತ್ತು ತೋಟಗಾರಿಕೆ ಇಲಾಖೆ ಹುಬ್ಬಳ್ಳಿ ಇವುಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಸಸಿ ನೆಡುವ ಮೂಲಕ ಚಾಲನೆ ನೀಡಿ, ಅವರು ಮಾತನಾಡಿದರು.

1973ರಲ್ಲಿ ವಿಶ್ವಸಂಸ್ಥೆಯು ಮೊದಲ ಬಾರಿಗೆ ಪರಿಸರ ಸಂರಕ್ಷಣೆ ಬಗ್ಗೆ ಅರಿವು ಮೂಡಿಸುವ ಹಿತದೃಷ್ಟಿಯಿಂದ ವಿಶ್ವದಾದ್ಯಂತ ವಿಶ್ವ ಪರಿಸರ ದಿನವನ್ನು ಆಚರಿಸಲಾಯಿತು. ಪ್ರಸ್ತುತ ಸುಮಾರು 173 ದೇಶಗಳಲ್ಲಿ ಪರಿಸರ ದಿನವನ್ನು ಆಚರಣೆ ಮಾಡಲಾಗುತ್ತಿದೆ. ಪರಿಸರ ಸಂರಕ್ಷಣೆ ಮಾಡುವ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಹಾಗೂ ಪರಿಸರವನ್ನು ಹಾಳು ಮಾಡದಂತೆ ತಡೆಯುವುದು ವಿಶ್ವ ಪರಿಸರ ದಿನದ ಮೂಲ



ಉದ್ದೇಶವಾಗಿದೆ. ಆಧುನಿಕತೆಯಿಂದ ಮನುಷ್ಯ ತನ್ನ ಸ್ವಾರ್ಥಕ್ಕಾಗಿ ಪರಿಸರವನ್ನು ಹಾಳು ಮಾಡುತ್ತಿದ್ದಾನೆ. ಅಲ್ಲದೇ ಪರಿಸರದ ಕುರಿತು ಜನರಲ್ಲಿ ಕಾಳಜಿ ಕಡಿಮೆಯಾಗುತ್ತಿದೆ. ಕೆರೆ, ರಸ್ತೆ ಹಾಗೂ ಸಾರ್ವಜನಿಕ ಪ್ರದೇಶಗಳಲ್ಲಿ ಜನರು ತ್ಯಾಜ್ಯವನ್ನು ಹಾಕದಂತೆ ಅಧಿಕಾರಿಗಳು ಕ್ರಮ ವಹಿಸಬೇಕಿದೆ ಎಂದರು.

ವಕೀಲರ ಸಂಘದ ಅಧ್ಯಕ್ಷ ಎಮ್.ಎಸ್. ಬಾಣದ ಮಾತನಾಡಿ, ಎಲ್ಲರೂ ಆರೋಗ್ಯದ ಬಗ್ಗೆ ಕಾಳಜಿ ವಹಿಸುವ ಹಾಗೆ ಪರಿಸರದ ಬಗ್ಗೆ ಕಾಳಜಿ ವಹಿಸಬೇಕು. ಸಾಲು ಮರದ ತಿಮ್ಮಕ್ಕ ಅವರ ಮನೋಭಾವನೆ ಎಲ್ಲರಲ್ಲಿಯೂ ಮೂಡಬೇಕಿದೆ. ದುಡಿದ ಹಣವನ್ನು ಆಸ್ಪತ್ರೆಗೆ ಹಾಕುವ ಬದಲು ಸಸಿ ನೆಡುವ ಮೂಲಕ ಆರೋಗ್ಯವನ್ನು ಕಾಪಾಡಿಕೊಂಡು ಹಣ ಉಳಿತಾಯ ಮಾಡಬಹುದು. ವಿಶ್ವ ಪರಿಸರ ದಿನ ಜೂನ್ 5ಕ್ಕೆ ಮಾತ್ರ ಸೀಮಿತವಾಗಬಾರದು. ಪ್ರತಿಯೊಂದು ಗ್ರಾಮ, ನಗರ ಪ್ರದೇಶದ ಜನರಲ್ಲಿ ಪರಿಸರದ ಕುರಿತು ಜಾಗೃತಿ ಮೂಡಿಸುವುದು ಅವಶ್ಯಕವಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ನೃಪತುಂಗ ಬೆಟ್ಟ, ಗಬ್ಬೂರು ಹಾಗೂ ವಿವಿಧ ಪ್ರದೇಶಗಳಲ್ಲಿ 1001 ಸಸಿಗಳ ನೆಡುವಿಕೆ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಸಾಂಕೇತಿಕವಾಗಿ ಸಸಿಗಳನ್ನು ವಿತರಣೆ ಮಾಡಲಾಯಿತು.

ವಲಯ ಅರಣ್ಯ ಅಧಿಕಾರಿ ಆರ್.ಎಸ್. ಉಪ್ಪಾರ ಮಾತನಾಡಿ, ಇಂದು ನಾವು ದೊಡ್ಡ ದೊಡ್ಡ ಕಟ್ಟಡಗಳ ನಿರ್ಮಾಣ, ಅಭಿವೃದ್ಧಿ ಕಾರ್ಯಗಳಿಂದ ಪರಿಸರದ ಮೇಲೆ ನಿಷ್ಕಾಳಜಿ ತೋರುತ್ತಿದ್ದೇವೆ. ಪ್ರತಿ ದಿನವೂ ಸಹ ಸಸಿ ನೆಡುವ ಕಾರ್ಯಕ್ರಮಗಳು ನಡೆಯುತ್ತಿರಬೇಕು. ಹೆಚ್ಚಾಗಿ ಮರಗಳನ್ನು ಬೆಳೆಸುವುದರಿಂದ ಬರಗಾಲ ಪರಿಸ್ಥಿತಿ ಉಂಟಾಗುವುದನ್ನು ತಡೆಯಬಹುದು. ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಪರಿಸರ ಸಹಕಾರಿಯಾಗಿದೆ. ಹೀಗಾಗಿ ಪರಿಸರ ರಕ್ಷಣೆಗೆ ಎಲ್ಲರೂ ಪಣತೊಡಬೇಕು ಎಂದರು.

ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕ ಪ್ರಭುಲಿಂಗ ಗಡ್ಡದ, ಅರಣ್ಯ ಅಧಿಕಾರಿ ಪ್ರಕಾಶ ಕರಗುಪ್ಪಿ, ಹುಬ್ಬಳ್ಳಿ ನ್ಯಾಯಾಲಯದ ಎಲ್ಲಾ ಗೌರವಾನ್ವಿತ ನ್ಯಾಯಾಧೀಶರು, ಅರಣ್ಯ ಇಲಾಖೆ, ತೋಟಗಾರಿಕೆ ಇಲಾಖೆಯ ಸಿಬ್ಬಂದಿ ಪಾಲ್ಗೊಂಡಿದ್ದರು.

ತಾಲೂಕು ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿ ರಾಜಶೇಖರ ತಿಳಗಂಜಿ ನಿರೂಪಿಸಿ, ವಂದಿಸಿದರು.

# ರಂಗಶಿಕ್ಷಣ ತರಬೇತಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ಸರ್ಕಾರದಿಂದ ಮೈಸೂರಿನಲ್ಲಿ ಸ್ಥಾಪಿತವಾಗಿರುವ ರಂಗಾಯಣ ರೆಪರ್ಟರಿಯು ಕಳೆದ 15 ವರ್ಷಗಳ ಹಿಂದೆ ಸ್ಥಾಪಿಸಿದ ಭಾರತೀಯ ರಂಗಶಿಕ್ಷಣ ಕೇಂದ್ರ ಪೂರ್ಣ ಪ್ರಮಾಣದ ರಂಗಶಿಕ್ಷಣವನ್ನು ನೀಡುವ ಸಂಸ್ಥೆಯಾಗಿದೆ. ಪ್ರತಿ ವರ್ಷದಂತೆ 2024-25ನೇ ಸಾಲಿಗೆ ರಂಗಶಿಕ್ಷಣದಲ್ಲಿ ಹತ್ತು ತಿಂಗಳ ಡಿಪ್ಲೊಮಾ ಕೋರ್ಸ್‌ಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ರಂಗತರಬೇತಿ ಪಡೆಯುವ ವಿದ್ಯಾರ್ಥಿಗಳು ರಂಗಭೂಮಿಯ ಪ್ರಾಥಮಿಕ ಅನುಭವ ಹೊಂದಿರಬೇಕು. ಅರ್ಜಿ ಸಲ್ಲಿಸಲು 18ರಿಂದ 28 ವರ್ಷಗಳು ತುಂಬಿರಬೇಕು. ಆಯ್ಕೆಯಾದ ವಿದ್ಯಾರ್ಥಿಗಳಿಗೆ ವಸತಿ ವ್ಯವಸ್ಥೆ ಮತ್ತು ವಿದ್ಯಾರ್ಥಿ ವೇತನ ನೀಡಲಾಗುವುದು.

ಆಸಕ್ತಿಯುಳ್ಳ ವಿದ್ಯಾರ್ಥಿಗಳು ವೆಬ್‌ಸೈಟ್ http://rangayana-mysore.karnataka.gov.in ನಲ್ಲಿ ಅರ್ಜಿಯನ್ನು ಪಡೆದು ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಜೂನ್ 20ರ ಸಂಜೆ 5.30ರೊಳಗೆ ಅಂಚೆಯ ಮೂಲಕ ಅಥವಾ ಉಪನಿರ್ದೇಶಕರ ಕಚೇರಿ ರಂಗಾಯಣ ಮೈಸೂರಿಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ- 0821-2512639, 9148827720ಗೆ ಅಥವಾ ವೆಬ್‌ಸೈಟ್ http://rangayanamysore.karnataka.gov.in ಸಂಪರ್ಕಿಸಬಹುದು ಎಂದು ಧಾರವಾಡ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಗದುಗಿನ ಸೇವಾ ಭಾರತಿ ಟ್ರಸ್ಟ್‌ನ ಅರುಣೋದಯ ವಿಶೇಷ ಮಕ್ಕಳ ಶಾಲೆಯ ಎದುರಿನ ಪ್ರಾಂಗಣದಲ್ಲಿ ಬುಧವಾರ ಸಸಿ ನೆಡುವ ಮೂಲಕ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು. ಶಾಲಾ ಆಡಳಿತ ಮಂಡಳಿಯ ಉಪಾಧ್ಯಕ್ಷ ಲುಕ್ಕಣಸಾ ರಾಜೋಳಿ, ಸದಸ್ಯರಾದ ಡಾ. ಉಮೇಶ ಹಾದಿ, ಬಸವರಾಜ ನಾಗಲಾಪೂರ ಅವರು ಮಕ್ಕಳೊಂದಿಗೆ ಸಸಿ ನೆಟ್ಟರು. ಶಾಲಾ ಮುಖ್ಯೋಪಾಧ್ಯಾಯ ಮಲ್ಲಪ್ಪ ಹಕ್ಕಿ, ಶಿಕ್ಷಕರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ದುರ್ಗಾದೇವಿ ಶಿಕ್ಷಣ ಸಮಿತಿಯಲ್ಲಿ ಪರಿಸರ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಗಂಗಾಪೂರ ಪೇಟೆಯಲ್ಲಿರುವ ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯಲ್ಲಿ ಬುಧವಾರ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು.

ಶಾಲೆಯ ಮುಖ್ಯೋಪಾಧ್ಯಾಯರಾದ ಎಚ್.ಎಂ. ನದಾಫ್ ಅವರು ಮಕ್ಕಳಿಗೆ ಪರಿಸರದ ಮಹತ್ವದ ಕುರಿತು ತಿಳಿ ಹೇಳಿ, ಪ್ರತಿಯೊಬ್ಬರೂ ಸಸಿ ನೆಡುವ ಮೂಲಕ ಪರಿಸರವನ್ನು



ರಕ್ಷಣೆ ಮಾಡಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಸಹ ಶಿಕ್ಷಕಿಯರಾದ ಎಂ.ಎಂ. ಹಿಡ್ಕಿಮಠ, ರೇಖಾ ಅಂಗಡಿ, ವಿ.ವಿ. ಕಲ್ಮನಿ, ಜೆ.ವಿ. ಅರಸಿದ್ದಿ, ಬಿ.ಎ. ಬಳ್ಳಾರಿ ಹಾಗೂ ಸಿಬ್ಬಂದಿಗಳಾದ ಲಕ್ಷ್ಮೀ ಕಮಡೊಳ್ಳಿ, ಸೈನಾಜಬಾನು ರೋಣ ಸೇರಿದಂತೆ ಶಾಲೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಡಿಮ್ಹಾನ್ಸ್ ಸಂಸ್ಥೆಯಲ್ಲಿ ವಿಶ್ವ ಪರಿಸರ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನಗಳ ಸಂಸ್ಥೆ (ಡಿಮ್ಹಾನ್ಸ್)ಯಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಜೂನ್ 5ರಂದು ಡಿಮ್ಹಾನ್ಸ್ ಸಂಸ್ಥೆಯ ಆವರಣದಲ್ಲಿ ಸಸಿಗಳನ್ನು ನೆಡಲಾಯಿತು.ಡಿಮ್ಹಾನ್ಸ್ ಸಂಸ್ಥೆಯ ನಿರ್ದೇಶಕ ಡಾ. ಅರುಣಕುಮಾರ ಸಿ ಸಸಿ ನೆಟ್ಟು, ನೀರುಣಿಸುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಡಿಮ್ಹಾನ್ಸ್‌ನ ವೈದ್ಯಕೀಯ ಅಧೀಕ್ಷಕ ಡಾ. ರಾಘವೇಂದ್ರ ನಾಯಕ್, ಶುಶ್ರೂಷಕ ಅಧೀಕ್ಷಕರಾದ ಗಾಯತ್ರಿ ಶಿಂಧೆ, ಮನೋವೈದ್ಯರು ಹಾಗೂ ಸಹ ಪ್ರಾಧ್ಯಾಪಕರಾದ ಡಾ.ಮಂಜುನಾಥ ಭಜಂತ್ರಿ, ಮನೋವೈದ್ಯಕೀಯ ಸಮಾಜಕಾರ್ಯ ವಿಭಾಗದ ಸಿಬ್ಬಂದಿಗಳಾದ ಅಶೋಕ ಕೋರಿ, ಆರ್.ಎಮ್. ತಿಮ್ಮಾಪೂರ, ಅನಂತರಾಮು ಬಿ.ಜಿ, ನರ್ಸಿಂಗ್ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಸುನಂದಾ ಜಿ.ಟಿ, ಡಾ. ಶ್ರೀಧರ ಕುಲಕರ್ಣಿ, ವೈದ್ಯಾಧಿಕಾರಿಗಳಾದ ಡಾ. ವಾಯ್.ಎಲ್. ಕಲಕುಟಕರ್, ಶುಶ್ರೂಷಕ ಅಧಿಕಾರಿಗಳು, ಡಿಮ್ಹಾನ್ಸ್ ಸಂಸ್ಥೆಯ ಇತರ ವಿಭಾಗದ ಸಿಬ್ಬಂದಿಗಳು, ಸಮಾಜಕಾರ್ಯ ವಿಭಾಗದ ಪ್ರಶಿಕ್ಷಣಾರ್ಥಿಗಳು, ಎಂ.ಫಿಲ್ ವಿದ್ಯಾರ್ಥಿಗಳು, ಎಸ್.ವಿ.ವಾಯ್.ಎಮ್ ಸಂಸ್ಥೆಯ ಡಾ.ಮೋಹನಕುಮಾರ ಥಂಬದ ಹಾಗೂ ಇತರರು ಭಾಗವಹಿಸಿದ್ದರು.

# ನೆಟ್ಟ ಸಸಿಗಳ ಬಗ್ಗೆ ಕಾಳಜಿಯಿರಲಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಶಿಗ್ಲಿ ಕ್ಲಸ್ಟರ್ ಸರಕಾರಿ ಮಾದರಿ ಹೆಣ್ಣು ಮಕ್ಕಳ ಶಾಲೆಯಲ್ಲಿ ಬುಧವಾರ ನೆಡುವುದರೊಂದಿಗೆ ಪರಿಸರ ದಿನವನ್ನು ಆಚರಿಸಲಾಯಿತು. ಕ್ಷೇತ್ರ ಶಿಕ್ಷಣಧಿಕಾರಿ ಎಚ್.ಎನ್. ನಾಯಕ್ ಸಸಿಗಳನ್ನು ನೆಡುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪರಿಸರ ದಿನಾಚರಣೆ ದಿನದಂದು ಸಸಿಗಳನ್ನು ನೆಟ್ಟು ಕಾಳಜಿ ಮಾಡದೆ ಬಿಡುವದರಿಂದ ಈ ಆಚರಣೆಗೆ ಮಹತ್ವ ದೊರೆಯುವದಿಲ್ಲ. ಈ ಯೋಜನೆ ಯಶಸ್ವಿಯಾಗಬೇಕಾದರೆ ಎಲ್ಲ ಶಾಲೆಗಳಲ್ಲಿ ನೀಡಿರುವ ಸಸಿಗಳನ್ನು ನೆಟ್ಟು ಕಾಳಜಿಯಿಂದ ಬೆಳೆಸುವ ಕಾರ್ಯ ಮಾಡಬೇಕು ಎಂದು ಹೇಳಿದರು.

ಶಿಗ್ಲಿ ಕೆನರಾ ಬ್ಯಾಂಕ್ ವ್ಯವಸ್ಥಾಪಕ ಡಿಸೋಜ, ಸಿಬ್ಬಂದಿ ಬೂದಿಹಾಳ ಸಸಿಗಳನ್ನು ನೆಟ್ಟರು. ಬಿಆರ್‌ಪಿ ಈಶ್ವರ ಮೆಡ್ಲೇರಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಇನ್‌ಸ್ಪೈರ್ ಅವಾರ್ಡ್‌ನಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳಾದ ಫಾತಿಮ ನದಾಫ್, ಮುಸ್ಕಾನ್ ಶಿರಬಡಗಿ ಅವರನ್ನು ಸನ್ಮಾನಿಸಲಾಯಿತು. ಶಾಲೆಯ ಪ್ರಧಾನ ಗುರುಗಳಾದ ಸೋಮನಕಟ್ಟಿ ಸ್ವಾಗತಿಸಿದರು. ಎಸ್‌ಡಿಎಂಸಿ ಅಧ್ಯಕ್ಷ ವೀರಣ್ಣ ಅಳ್ಳಳ್ಳಿ ಅಧ್ಯಕ್ಷತೆ ವಹಿಸಿದ್ದರು. ಜಿ.ಪಿ. ನಾವಿ ನಿರೂಪಿಸಿದರು. ಪಿ.ಎ. ಕೊರವರ ವಂದಿಸಿದರು. ಸಿಆರ್‌ಪಿ ಜ್ಯೋತಿ ಗಾಯಕವಾಡ, ಎಸ್‌ಡಿಎಂಸಿ ಸದಸ್ಯರಾದ ಗದಿಗೆಪ್ಪ ಮಾಗಡಿ, ಶಾಲೆಯ ಎಲ್ಲಾ ಸಿಬ್ಬಂದಿ ಬಳಗದವರು, ಎಸ್.ಬಿ. ಅಣ್ಣಿಗೇರಿ ಉಪಸ್ಥಿತರಿದ್ದರು.

# ಮರಗಳನ್ನು ಬೆಳೆಸಿ ಬರ ನೀಗಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಸರವನ್ನು ಉಳಿಸಬೇಕೆಂದರೆ ಮರಗಳನ್ನು ಬೆಳೆಸಬೇಕು. ಕೇವಲ ಮರಗಳನ್ನು ನೆಡುವುದು ಮಾತ್ರವಲ್ಲ, ಆ ಮರಕ್ಕೆ ನೀರೆರೆದು ಕಾಪಾಡಿ ಅದು ದೊಡ್ಡದಾಗುವವರೆಗೂ ಸಂರಕ್ಷಿಸಬೇಕು. ಅಂದಾಗ ಮಾತ್ರ ಪರಿಸರ ಉಳಿಸಲು ಸಾಧ್ಯವಾಗುತ್ತದೆ.

ಇತ್ತೀಚಿನ ದಿನಗಳಲ್ಲಿ ಭೂಮಿಯ ತಾಪಮಾನ ಹೆಚ್ಚಾಗಿ ಜೀವ ಸಂಕುಲಗಳಿಗೆ ತೊಂದರೆಯಾಗುತ್ತದೆ. ಭೂಮಿಯ ತೇವಾಂಶ ಜಾಸ್ತಿ ಆಗಲು ನಾವು ಹೆಚ್ಚೆಚ್ಚು ಮರಗಳನ್ನು ಬೆಳೆಸಬೇಕು ಎಂದು ಪ್ರಾ. ಬಿ.ಬಿ. ಗೌಡರ ಅಭಿಪ್ರಾಯಪಟ್ಟರು.

ಕಲ್ಯಾಣಸಿರಿ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಪರಿಸರ



ದಿನಾಚರಣೆಯ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕ. ರಾ. ಮು. ವಿ ಪ್ರಾದೇಶಿಕ ನಿರ್ದೇಶಕರಾದ ಸಿದ್ಧಾರ್ಥ ಬಿ.ಎನ್. ಮಾತನಾಡಿ, ಎಲ್ಲರೂ ತಮ್ಮ ತಮ್ಮ ಪರಿಸರದಲ್ಲಿ ಒಂದೊಂದು ಗಿಡವನ್ನು ಬೆಳೆಸಿದರೆ ಅದು ಎಲ್ಲ ಪ್ರಾಣಿ-ಪಕ್ಷಿಗಳಿಗೆ ಸಹಾಯವಾಗುತ್ತದೆ. ವಿದ್ಯಾರ್ಥಿಗಳು ಆ ನಿಟ್ಟಿನಲ್ಲಿ ಮುಂದುವರೆಯಬೇಕು ಎಂದು ಹೇಳಿದರು. ಎನ್.ಎಸ್. ಎಸ್. ಕಾರ್ಯಕ್ರಮ ಅಧಿಕಾರಿಗಳಾದ ಪ್ರೊ. ಎಂ.ಎಚ್. ಕುರಿ ಸ್ವಾಗತಿಸಿ, ನಿರೂಪಿಸಿದರು. ಕಾರ್ಯಕ್ರಮದಲ್ಲಿ ಎಲ್ಲ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ರಾಜಕೀಯ ಸೇಡು ತೀರಿಸಿಕೊಳ್ಳುವುದಲ್ಲ : ಅಮೇಥಿ ಕಾಂಗ್ರೆಸ್ ಸಂಸದ ಕಿಶೋರಿ ಲಾಲ್ ಶರ್ಮಾ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

"ಕ್ಷೇತ್ರವು ಗಾಂಧಿ ಕುಟುಂಬದ ನಂಬಿಕೆ ಇದ್ದಂತೆ, ನಂಬಿಕೆಯಲ್ಲಿ ಉಲ್ಲಂಘನೆ ಇಲ್ಲ ಎಂಬುದನ್ನು ಖಚಿತಪಡಿಸಿಕೊಳ್ಳುತ್ತೇನೆ" ಎಂದು ಕಾಂಗ್ರೆಸ್‌ನಿಂದ ಹೊಸದಾಗಿ ಚುನಾಯಿತ ರಾಗಿರುವ ಅಮೇಥಿ ಸಂಸದ ಕಿಶೋರಿ ಲಾಲ್ ಶರ್ಮಾ ಬುಧವಾರ ಹೇಳಿದ್ದಾರೆ.

ಹಾಲಿ ಬಿಜೆಪಿ ಸಂಸದೆ ಮತ್ತು ಕೇಂದ್ರ ಸಚಿವೆ ಸ್ಮೃತಿ ಇರಾನಿ ಅವರನ್ನು 1.67 ಲಕ್ಷ ಮತಗಳ ಭಾರಿ ಅಂತರದಿಂದ ಸೋಲಿಸುವ ಮೂಲಕ ದೈತ್ಯ ಸಂಹಾರಕರಾಗಿ ಹೊರಹೊಮ್ಮಿದ ಶರ್ಮಾ, 2019 ರಲ್ಲಿ ಸ್ಮೃತಿ ಇರಾನಿಯವರು ರಾಹುಲ್ ಗಾಂಧಿಯವರ ಮೇಲೆ ಬೀರಿದ ಸೋಲಿನ "ಸೇಡಿನ" ದೃಷ್ಟಿಯಿಂದ ನನ್ನ ವಿಜಯವನ್ನು ನೋಡುವುದಿಲ್ಲ ಎಂದು ಹೇಳಿದ್ದಾರೆ.

"ರಾಜಕೀಯವೆಂದರೆ ಸೇಡು ತೀರಿಸಿಕೊಳ್ಳುವುದಲ್ಲ; ಇದು ಕ್ರೀಡಾ ಮನೋಭಾವದಂತಿದೆ, ಒಬ್ಬರು ಗೆಲ್ಲಬೇಕು ಮತ್ತು ಇನ್ನೊಬ್ಬರು ಸೋಲುತ್ತಾರೆ. ಸೇಡು ಮತ್ತು ಎಲ್ಲದರ ವಿಷಯದಲ್ಲಿ ನಾವು ವಿಷಯಗಳನ್ನು ನೋಡುವುದಿಲ್ಲ" ಎಂದು ಶರ್ಮಾ ಇಲ್ಲಿ ನೀಡಿದ ಸಂದರ್ಶನದಲ್ಲಿ ಹೇಳಿದರು.

ರಾಯ್ ಬರೇಲಿ ಕ್ಷೇತ್ರವನ್ನು ರಾಹುಲ್ ಗಾಂಧಿ ಉಳಿಸಿಕೊಳ್ಳಬೇಕೆಂದು ಅವರು ಬಯಸಿದರೂ, ಅವರು ಲೋಕಸಭೆಯಲ್ಲಿ ಯಾವ ಕ್ಷೇತ್ರವನ್ನು ಪ್ರತಿನಿಧಿಸುತ್ತಾರೆ ಎಂಬುದನ್ನು ರಾಹುಲ್ ಗಾಂಧಿ ನಿರ್ಧರಿಸಬೇಕು ಎಂದು ಅವರು ಹೇಳಿದರು.

ಅಮೇಠಿಯಲ್ಲಿ ತಮ್ಮ ಗೆಲುವಿನ ಬಗ್ಗೆ ಮಾತನಾಡಿದ ಶರ್ಮಾ, ಇದು ಅಮೇಥಿಯ ಜನರು ಮತ್ತು ಗಾಂಧಿ ಕುಟುಂಬದ ವಿಜಯವಾಗಿದೆ ಎಂದರು.

ಅಮೇಥಿ ಕ್ಷೇತ್ರವು ಗಾಂಧಿ ಕುಟುಂಬದ 'ಅಮಾನತ್' (ನಂಬಿಕೆ) ಆಗಿದ್ದು, ಅಮಾನತ್ ಮೇ ಖಯಾನತ್ (ನಂಬಿಕೆ ಉಲ್ಲಂಘನೆ) ಆಗದಂತೆ ನೋಡಿಕೊಳ್ಳುವುದಾಗಿ ಶರ್ಮಾ ಹೇಳಿದ್ದಾರೆ.

ಈ ಬಾರಿ ರಾಹುಲ್ ಗಾಂಧಿ ರಾಯ್ ಬರೇಲಿ ಕ್ಷೇತ್ರದಿಂದ ಲೋಕಸಭೆಗೆ ಸ್ಪರ್ಧಿಸಿದರೆ, ಗಾಂಧಿ ಕುಟುಂಬದ ಆಪ್ತರಾಗಿದ್ದ ಶರ್ಮಾ ಅವರನ್ನು ಅಮೇಥಿ ಲೋಕಸಭಾ ಕ್ಷೇತ್ರದಿಂದ ಇರಾನಿ ವಿರುದ್ಧ ಕಣಕ್ಕಿಳಿಸಲಾಗಿದೆ. ಶರ್ಮಾ ಅವರು ರಾಯ್ ಬರೇಲಿ ಮತ್ತು ಅಮೇಥಿ ಎರಡಕ್ಕೂ ಸಂಸದರ ಪ್ರತಿನಿಧಿಯಾಗಿದ್ದರು, ಎರಡು ಗಾಂಧಿ ಕುಟುಂಬದ ಭದ್ರಕೋಟೆಗಳನ್ನು ನೋಡಿಕೊಳ್ಳುತ್ತಿದ್ದರು.

# ಅಹಂಕಾರದ ರಾಜಕಾರಣಕ್ಕೆ ಲಗಾಮು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು


ಈ ಬಾರಿಯ ಲೋಕಸಭಾ ಚುನಾವಣಾ ಫಲಿತಾಂಶದಿಂದ ದ್ವೇಷ ಮತ್ತು ಅಹಂಕಾರದ ರಾಜಕಾರಣಕ್ಕೆ ಮತದಾರ ಮೂಗುದಾರ ತೊಡಿಸಿದ್ದಾನೆ. ಬಣ್ಣದ ಮಾತುಗಳು ಹೆಚ್ಚು ಕಾಲ ನಡೆಯದು ಎಂಬುದು ಈ ಫಲಿತಾಂಶದಿಂದ ಸ್ಪಷ್ಟವಾಗಿದೆ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ರಾಜ್ಯ ಅಧ್ಯಕ್ಷ ಅಡ್ವಕೇಟ್ ತಾಹೇರ್ ಹುಸೇನ್ ಹೇಳಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಧರ್ಮದ ಭಾವನೆ ಕೆರಳಿಸುವ ಪ್ರಯತ್ನ ಮಾಡಿಯೂ ರಾಜ್ಯದಲ್ಲಿ ಮೋದಿ ವರ್ಚಸ್ಸು ಪರಿಣಾಮ ಬೀರಿಲ್ಲ. ಕೈಯಲ್ಲಿರುವ ಸೀಟನ್ನು ಉಳಿಸಿಕೊಳ್ಳಲು ಅವರಿಂದಾಗಲಿಲ್ಲ. ರಾಜ್ಯ ಸರ್ಕಾರ ಕೂಡಾ ಹೆಚ್ಚಾಗಿ ಗ್ಯಾರಂಟಿಯನ್ನೇ ಅವಲಂಬಿಸಿತು. ನಿರೀಕ್ಷಿತ ಸ್ಥಾನವನ್ನು ಗಳಿಸದಿದ್ದರೂ ಒಂಬತ್ತು ಸ್ಥಾನ ಗೆದ್ದಿದೆ. ಬಿಜೆಪಿಯ ಅಹಂಕಾರದ ಹುಚ್ಚು ನಾಗಾಲೋಟಕ್ಕೆ ಮತದಾರ ಲಗಾಮು ಹಾಕಿದ್ದಾನೆ. ರಾಜ್ಯದಲ್ಲಿ ಕಾಂಗ್ರೆಸ್‌ಗೆ ನಿರೀಕ್ಷಿತ ಫಲಿತಾಂಶ ದೊರಕದಿರುವುದು ಕಾಂಗ್ರೆಸ್‌ಗೂ ಪಾಠವಾಗಿದೆ. ಕೇವಲ ಗ್ಯಾರಂಟಿಗಳಿಂದ ಗೆಲ್ಲಲಾಗದು. ದ್ವೇಷ ರಾಜಕಾರಣವನ್ನು ಮಟ್ಟಹಾಕಿ, ಭ್ರಷ್ಟಾಚಾರ ರಹಿತರಾಗಿ ಜನರ ಹಿತಾಸಕ್ತಿಗಳನ್ನು ಕಾಪಾಡಲು ಸರಕಾರ ಮುಂದಾಗಬೇಕು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

# ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಛಾಯಾಗ್ರಾಹಕರ ಕ್ಷೇಮಾಭಿವೃದ್ಧಿ ಹಾಗೂ ವಿವಿಧೋದ್ದೇಶಗಳ ಸಂಘ ಇವರ ಸಂಯುಕ್ತ ಆಶ್ರಯದಲ್ಲಿ ಜೂನ್ 5ರಂದು ವಿಶ್ವ ಪರಿಸರ ದಿನದ ಅಂಗವಾಗಿ ಶ್ರೀ ವೀರೇಶ್ವರ ಪುಣ್ಯಾಶ್ರಮದಲ್ಲಿ ಪರಮಪೂಜ್ಯ ಶ್ರೀ ಕಲ್ಲಯ್ಯಜ್ಜನವರ ದಿವ್ಯ ಸಾನಿಧ್ಯದಲ್ಲಿ ಶ್ರೀಮಠದ ಆವರಣದಲ್ಲಿ ವಿವಿಧ ಬಗೆಯ ಪುಷ್ಪ ಗಿಡಳಗಳನ್ನು ನೆಡುವ ಮೂಲಕ ವಿಶ್ವ ಪರಿಸರ ದಿನವನ್ನ ಆಚರಿಸಲಾಯಿತು.



ಈ ಸಂದರ್ಭದಲ್ಲಿ ವಿಜಯ್ ಕುಮಾರ್ ಕಾಗನೂರುಮಠ, ದ್ಯಾಮಣ್ಣ ಗೌಡರ್ ಇವರನ್ನು ಸಂಘದ ಜಿಲ್ಲಾಧ್ಯಕ್ಷ ಪವನ್ ಕೆ.ಮೇಹರವಾಡೆ ಸನ್ಮಾನಿಸಿದರು.

ಕಾರ್ಯಕ್ರಮದಲ್ಲಿ ಸಂಘದ ಪ್ರಭಾರಿ ಕಾರ್ಯದರ್ಶಿ ಮಹಾದೇವಗೌಡ ಸಂಕನಗೌಡ್ರು, ಕೊಟ್ರೇಶ ಕುಂದ್ರಳ್ಳಿ, ವೈಜನ್ನಾಥ್ ಕೌತಾಳ, ಈರಣ್ಣ ಹೆಬಸೂರ, ಮಂಜುನಾಥ್, ಲಕ್ಷಶೆಟ್ಟಿ, ರಾಜು ಬಾಕಳೆ, ರಾಜು ಬದಿ. ಸಂಗಮೇಶ ಜಕ್ಕಲಿ, ಸಂತೋಷ್ ಗೋಕಾವಿ, ಷಣ್ಮುಖ ಬಾಕಳೆ, ಪ್ರಕಾಶ್ ವಸ್ತ್ರದ, ರಾಮ್ ಕಠಾರೆ, ಗಂಗಾಧರ್ ಮಡ್ಡಿ, ಕುಮಾರ್ ನಾಗನೂರುಮಠ, ನಾರಾಯಣ ಮಿಸ್ಕಿನ್, ಸಂತೋಷ್ ಗೌಡರ್, ಸಂಗ್ರಾಮ್ ಕೊರ್ಲಹಳ್ಳಿ, ರವಿ ಬಳಿಗೆರ್, ರಾಮಣ್ಣ ವಗ್ಗಿ, ಬಸವರಾಜ ಗುಂಡಪ್ಪನವರ್, ಹನುಮಂತ್ ರಾಮಗಿರಿ, ವೀರೇಶ ಶಾಮನಗೌಡ್ರು, ವೀರೇಶ್ ಮುದ್ದಿ ಮುಂತಾದವರಿದ್ದರು.

# ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತ್ಯುತ್ಸವ

■ವಿಜಯಸಾಕ್ಷಿ ಸುದ್ದಿ, ನರೇಗಲ್

ನಾಲ್ವಡಿ ಕೃಷ್ಣರಾಜ ಒಡೆಯರ್ ರವರು ಅಪರೂಪದ ಮಹಾರಾಜರು. ಇಡೀ ಜಗತ್ತೇ ಮೈಸೂರು ಕಡೆಗೆ ಮುಖ ಮಾಡುವಂತೆ ಮಾಡಿದವರು. ಮೈಸೂರು ರಾಜ್ಯ ನಿರ್ಮಾಣದಲ್ಲಿ ಅವರ ಪಾತ್ರ ದೊಡ್ಡದು. ಮೈಸೂರನ್ನು ಆಧುನೀಕರಣಗೊಳಿಸಲು ಅವರು ಪಟ್ಟ ಶ್ರಮ ದೊಡ್ಡದು ಎಂದು ಪ.ಪಂ ಮುಖ್ಯಾಧಿಕಾರಿ ನಾಗಭೂಷಣ ಎನ್ ಹೇಳಿದರು.

ಇಲ್ಲಿನ ಪ.ಪಂ ಸಭಾಭವನದಲ್ಲಿ ಮಂಗಳವಾರ ಆಚರಿಸಲಾದ ನಾಲ್ವಡಿ ಕೃಷ್ಣರಾಜ ಒಡೆಯರ್



ಜಯಂತ್ಯುತ್ಸವದಲ್ಲಿ ಅವರು ಮಾತನಾಡಿದರು.

ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಿದ ನಾಲ್ವಡಿ ಕೃಷ್ಣರಾಜ ಒಡೆಯರ್ ಶಿಕ್ಷಣ, ನೀರಾವರಿ, ವಿಜ್ಞಾನ, ಕೈಗಾರಿಕೆ, ಮಹಿಳಾ ಶಿಕ್ಷಣ, ಹಿಂದುಳಿದ ಹಾಗೂ ಬಡ ಜನರ ಬಗ್ಗೆ ಸಂವೇದನಾಶೀಲರಾಗಿ ಚಿಂತಿಸಿ ಪ್ರಗತಿಪರ ನಿರ್ಧಾರಗಳನ್ನು ಕೈಕೊಂಡು ಇತಿಹಾಸದಲ್ಲಿ ಮರೆಯಲಾಗದ ಮಹಾರಾಜರಾಗಿದ್ದಾರೆ ಎಂದರು.

ಎಸ್.ಕೆ. ದೊಡ್ಡಣ್ಣವರ, ರಮೇಶ ಹಲಗಿ, ಅಡಿವೆಪ್ಪ ಮೆಣಸಗಿ, ವಿ.ಐ. ಮಡಿವಾಳರ, ಉದಯ ಮುದೇನಗುಡಿ, ಮಹಾದೇವ ಮ್ಯಾಗೇರಿ, ಎನ್.ಬಿ. ಬೇಲೇರಿ, ಕಾವ್ಯಾ ಅರವಟಗಿಮಠ, ಪಿ.ಜಿ. ರಾಂಪೂರ, ನೀಲಪ್ಪ ಚಳ್ಳಮರದ, ಫಕ್ಕೀರೇಶ ತಮ್ಮಣ್ಣವರ, ನಿಂಗಪ್ಪ ಮಡಿವಾಳರ, ಸಿ.ವಿ. ಹೊನವಾಡ, ಜೆ.ಡಿ. ಬಂಕಾಪೂರ ಸೇರಿದಂತೆ ಪ.ಪಂ ಸಿಬ್ಬಂದಿಗಳು ಇದ್ದರು.

## NTTF ನಲ್ಲಿ ವಿಶ್ವ ಪರಿಸರ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಓಖಿಖಿಈ ಕಾಲೇಜಿನಲ್ಲಿ ವಿಶ್ವ ಪರಿಸರ ದಿನಾಚರಣೆ ಆಚರಿಸಲಾಯಿತು. ಸಂಸ್ಥೆಯ ಚೇರ್ಮನ್ ಕೃಷ್ಣಗೌಡ. ಎಚ್. ಪಾಟೀಲ ಹಾಗೂ ಆರ್. ಆರ್. ಓದುಗೌಡ್ರ ಇವರ ನೇತೃತ್ವದಲ್ಲಿ ಸಸಿ ನೆಡಲಾಯಿತು.

ಈ ಸಂದರ್ಭದಲ್ಲಿ ಕಾಲೇಜಿನ ಆಡಳಿತ ಮಂಡಳಿಯ ಸದಸ್ಯರು, ಪ್ರಾಂಶುಪಾಲರು, ಸಿಬ್ಬಂದಿ ವರ್ಗ, ಗದಗ ಕೋ ಆಪ್ ಇಂಡಸ್ಟ್ರಿಯಲ್ ಎಸ್ಟೇಟ್ ಉದ್ದಿಮೆದಾರರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು..

## ರೈತ ಬಾಂಧವರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ತೋಟಗಾರಿಕೆ ಬೆಳೆಗಳಾದ ಈರುಳ್ಳಿ ಮತ್ತು ಕೆಂಪು ಮೆಣಸಿನಕಾಯಿ ಬೆಳೆಗೆ ವಿಮಾ ಸೌಲಭ್ಯ ಅಧಿಸೂಚನೆ ಹೊರಡಿಸಲಾಗಿದೆ. ನೀರಾವರಿ ಈರುಳ್ಳಿ ಮತ್ತು ಕೆಂಪು ಮೆಣಸಿನಕಾಯಿ ಬೆಳೆ ವಿಮೆ ಕಂತು ಪಾವತಿಗೆ ಜುಲೈ 31 ಕೊನೆಯ ದಿನವಾಗಿದೆ.

ಮಳೆಯಾಶ್ರಿತ ಈರುಳ್ಳಿ ಮತ್ತು ಕೆಂಪು ಮೆಣಸಿನಕಾಯಿ ಬೆಳೆಗೆ ವಿಮೆ ಕಂತು ಪಾವತಿಗೆ ಆಗಸ್ಟ್ 16 ಕೊನೆಯ ದಿನವಾಗಿದೆ. ರೈತರು ವಿಮೆಗೆ ನೋಂದಾಯಿಸಿಕೊಳ್ಳಲು ಅರ್ಜಿ ಪತ್ರ, ಪಹಣಿ, ಆಧಾರ್ ಸಂಖ್ಯೆ ಜೋಡಿಸಿದ ಬ್ಯಾಂಕ್ ಖಾತೆ ಪುಸ್ತಕದ ನಕಲು ಪ್ರತಿ ಹಾಗೂ ಸ್ವಯಂ ಘೋಷಿತ ಬೆಳೆ ದೃಢೀಕರಣ ಪತ್ರದೊಂದಿಗೆ ಹತ್ತಿರದ ರಾಷ್ಟ್ರೀಕೃತ ಬ್ಯಾಂಕ್, ಸಾಮಾನ್ಯ ಸೇವಾ ಕೇಂದ್ರ, ಗಾಮ ಒನ್ ಕೇಂದ್ರಗಳಿಗೆ ಸಂಪರ್ಕಿಸುವುದು.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ತೋಟಗಾರಿಕೆ ಇಲಾಖೆ, ಕೃಷಿ ಇಲಾಖೆ ಕಚೇರಿಗಳಿಗೆ ಭೇಟಿ ನೀಡಬಹುದಾಗಿದೆ ಎಂದು ತೋಟಗಾರಿಕೆ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿಂಕದಕಟ್ಟಿಯಲ್ಲಿ ಪರಿಸರ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ಬಿಂಕದಕಟ್ಟಿಯ ಶ್ರೀ ರಾಮಕರುಣಾನಂದ ಶಿಕ್ಷಣ ಸಂಸ್ಥೆಯ ಆಂಗ್ಲ ಮಾಧ್ಯಮ ಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆ ಆಚರಿಸಲಾಯಿತು.

ಸಂಸ್ಥೆಯ ಅಧ್ಯಕ್ಷರಾದ ವಿ. ಡಿ. ರಂಗಪ್ಪನವರ, ಕಾರ್ಯದರ್ಶಿ ರವಿ.ಎಮ್. ಮೂಲಿಮನಿ ಪಾಲ್ಗೊಂಡು, ಸಸಿಗಳಿಗೆ ನೀರು ಎರೆಯುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು.

ಶಾಲೆಯ ನರ್ಸರಿ ವಿಭಾಗದ ಪುಟಾಣಿಗಳು ಹಾಗೂ ಪಾಲಕರು ಕೂಡಾ ಸಸಿಗಳಿಗೆ ನೀರೆರೆದು ಕಾರ್ಯಕ್ರಮಕ್ಕೆ ಶೋಭೆ ತಂದರು.

ಶಾಲೆಯ ಪ್ರಾಂಶುಪಾಲ ರಾಘವೇಂದ್ರ ಕೆ.ಆರ್, ಪರಿಸರ ದಿನಾಚರಣೆಯ ಮಹತ್ವ ವಿವರಿಸಿದರು.

ಕಾರ್ಯಕ್ರಮದ ನಂತರ ಶಾಲೆಯ ಮಕ್ಕಳು ಬಿಂಕದಕಟ್ಟಿಯ ಬೀದಿ ಬೀದಿಗಳಲ್ಲಿ ಸಂಚರಿಸಿ ಗಿಡ ಮರ ಬೆಳೆಸಿ ಪರಿಸರ ಉಳಿಸಿ ಎಂಬ ಘೋಷಣೆಯನ್ನು ಕೂಗುತ್ತಾ ಸಾರ್ವಜನಿಕರಿಗೆ ಪರಿಸರ ಸಂರಕ್ಷಣೆಯ ಮಹತ್ವ ಸಾರಿದರು.

ಶ್ರೀಮತಿ ಸಮೀನ ಸರ್ವರಿಗೂ ಸ್ವಾಗತ ಕೋರಿದರು. ಶಿಕ್ಷಕಿಯರಾದ ಶ್ರೀಮತಿ ಗೀತಾ ಹಾಗೂ ಕುಮಾರಿ. ನಮ್ರತಾ ಕಾರ್ಯಕ್ರಮ ನಿರೂಪಿಸಿದರು. ಶ್ರೀಮತಿ ನಾಗರತ್ನ ವಂದನಾರ್ಪಣೆ ಗೈದರು.

## ತುಮಕೂರು: 3 ಲಕ್ಷ ಮೌಲ್ಯದ ಒಡವೆ ಹಿಂತಿರುಗಿಸಿ ಮಾದರಿಯಾದ ಕಂಡಕ್ಟರ್, ಚಾಲಕ

■ವಿಜಯಸಾಕ್ಷಿ ಸುದ್ದಿ, ತುಮಕೂರು

ಬಸ್‌ನಲ್ಲಿ ಬಿಟ್ಟು ಹೋಗಿದ್ದ 3 ಲಕ್ಷ ರೂ. ಮೌಲ್ಯದ ಒಡವೆಯನ್ನು ಮಾಲೀಕರಿಗೆ ಹಿಂತಿರುಗಿಸುವ ಮೂಲಕ ಕಂಡಕ್ಟರ್ ಹಾಗೂ ಬಸ್ ಚಾಲಕ ಪ್ರಾಮಾಣಿಕತೆ ಮೆರೆದಿದ್ದಾರೆ. ಒಡವೆ ಹಿಂತಿರುಗಿಸಿದ ಕೆಜಿಎಫ್ ಘಟಕದ ಕಂಡಕ್ಟರ್ ಕಲ್ಲಪ್ಪ ಹನುಮಂತ್ ಕವಣಿ ಮತ್ತು ಚಾಲಕ ಸಂತೋಷ್ ಕಾರ್ಯಕ್ಕೆ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಅದೋನಿಯಿಂದ ಪ್ರಯಾಣಿಸಿದ್ದ ಪ್ರಮೀಳಾ ಎಂಬವರು ಬಳ್ಳಾರಿಯಲ್ಲಿ ತಮ್ಮ ಬ್ಯಾಗ್‌ಅನ್ನು ಬಸ್‌ನಲ್ಲೇ ಬಿಟ್ಟು ಇಳಿದಿದ್ದರು. ಬಸ್‌ನಲ್ಲಿ ಬ್ಯಾಗ್ ಇರುವುದನ್ನು ಗಮನಿಸಿದ ಕಂಡಕ್ಟರ್ ಹಾಗೂ ಚಾಲಕ, ಶಿರಾ ಘಟಕಕ್ಕೆ ಬಂದು ಘಟಕದ ಮುಖ್ಯಸ್ಥರಿಗೆ ವಿಷಯ ತಿಳಿಸಿದ್ದಾರೆ. ನಂತರ ಹೊಸಪೇಟೆ, ಬಳ್ಳಾರಿ ಹಾಗೂ ಶಿರಾ ಡಿಪೋಗಳ ಮುಖ್ಯಸ್ಥರ ಸಹಕಾರದಿಂದ ಶಿರಾ ಘಟಕದಲ್ಲಿ ತಮ್ಮ ಬ್ಯಾಗ್ ಇರುವ ಮಾಹಿತಿ ಪ್ರಮೀಳಾ ಅವರಿಗೆ ಸಿಕ್ಕಿದೆ.

### ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಪರಿಸರ ದಿನಾಚರಣೆ

# ಪರಿಸರ ಸಮೃದ್ಧಿಗಾಗಿ ಕೊಡುಗೆ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಸರ ಸಮತೋಲನ ಕಾಪಾಡಲು ಹೆಚ್ಚು ಸಸಿಗಳನ್ನು ನೆಡಬೇಕು. ಅವುಗಳನ್ನು ಪಾಲನೆ, ಪೋಷಣೆ ಮಾಡಿ ಗಿಡಗಳಾದ ಮೇಲೆ ಸಂರಕ್ಷಣೆ ಮಾಡಬೇಕು. ಈ ಸಂರಕ್ಷಣೆಯ ಕಾಳಜಿಯಿಂದ ಜೀವಿಗಳ ಪೋಷಣೆಯೂ ಸಾಧ್ಯವಾಗುತ್ತದೆ ಎಂದು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಪತಿಗಳು (ಪ್ರಭಾರ) ಹಾಗೂ ಕುಲಸಚಿವರಾದ ಪ್ರೊ. ಡಾ. ಸುರೇಶ ವಿ. ನಾಡಗೌಡರ ಅಭಿಪ್ರಾಯಪಟ್ಟರು.

ಬುಧವಾರ ವಿಶ್ವವಿದ್ಯಾಲಯ, ಎನ್‌ಎಸ್‌ಎಸ್ ಕೋಶ ಹಾಗೂ ಜಿಲ್ಲಾ ಅರಣ್ಯ ಇಲಾಖೆ ಇವರುಗಳ ಸಹಯೋಗದೊಂದಿಗೆ ವಿಶ್ವವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಪರಿಸರದ ದಿನದ ಕಾರ್ಯಕ್ರಮದಲ್ಲಿ ಸಬರಮತಿ ಆಶ್ರಮದ ಗಾಂಧಿ ಪ್ರತಿಮೆಗೆ ಪುಷ್ಪ ನಮನ ಸಲ್ಲಿಸುವ ಮೂಲಕ



ಚಾಲನೆ ನೀಡಿ ಅವರು ಮಾತನಾಡಿದರು.

ಯುವಜನತೆ ಪರಿಸರದ ಸಮೃದ್ಧಿಗಾಗಿ ಕೊಡುಗೆ ನೀಡಬೇಕು. ಪರಿಸರ ಸಮೃದ್ಧಿಯಿಂದ ಇದ್ದರೆ ಮಾತ್ರ ಆರೋಗ್ಯಕರ ಜೀವನ ನಡೆಸಲು ಸಾಧ್ಯ. ಯುವ ವಿದ್ಯಾರ್ಥಿಗಳಲ್ಲಿ ಪರಿಸರ ಕುರಿತಾದ ಕಾಳಜಿಯು ನಿರಂತರ ಮತ್ತು ಶಾಶ್ವತವಾಗಿರಲೆಂದು ವಿಶ್ವವಿದ್ಯಾಲಯದಲ್ಲಿ ಪ್ರತಿ ವರ್ಷ ಪರಿಸರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಿಕೊಂಡು ಬರಲಾಗಿದೆ. ಇಂದು ವಿಶ್ವವಿದ್ಯಾಲಯದ ಆವರಣದಲ್ಲಿ ಸಾವಿರ ಗಿಡಗಳನ್ನು ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದೆ. ಒಟ್ಟು 50 ಸಾವಿರ ಗಿಡಗಳನ್ನು ನೆಟ್ಟು ವಿಶ್ವವಿದ್ಯಾಲಯವನ್ನು ಹಸಿರು ವಿಶ್ವವಿದ್ಯಾಲಯವನ್ನಾಗಿಸುವ ಗುರಿಯನ್ನು ಹೊಂದಲಾಗಿದೆ ಎಂದು ಹೇಳಿದರು.

> ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಗದಗ ಜಿಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಲೋಕರಾಜ ಮೀನಾ ಅವರು ಮಾತನಾಡಿ, ಪ್ರಕೃತಿ ತನ್ನತನವನ್ನು, ಸಮತೋಲನವನ್ನು ಕಳೆದುಕೊಳ್ಳುತ್ತಿದೆ. ತನ್ನ ಜೀವವೈವಿಧ್ಯತೆಯನ್ನು, ತನ್ನ ನೈಸರ್ಗಿಕ ಸೌಂದರ್ಯ, ತನ್ಮಯತೆಯನ್ನು ಉಳಿಸಿಕೊಳ್ಳಬೇಕಾದರೆ ಪ್ರತಿಯೊಬ್ಬರೂ ಪರಿಸರ ಸಂರಕ್ಷಣೆಯ ಹೊಣೆಯನ್ನು ಹೊಂದಬೇಕು ಎಂದರು.

ಸಭಾ ಕಾರ್ಯಕ್ರಮದ ನಂತರ ವಿಶ್ವವಿದ್ಯಾಲಯದ ಆವರಣದಲ್ಲಿ ವಿವಿಧ ಜಾತಿಯ ಸಾವಿರಕ್ಕೂ ಹೆಚ್ಚು ಗಿಡಗಳನ್ನು ವಿದ್ಯಾರ್ಥಿಗಳು ಮತ್ತು ಬೋಧಕ-ಬೋಧಕೇತರ ವೃಂದದವರು ಸೇರಿ ನೆಟ್ಟು, ಪರಿಸರ ಪ್ರೇಮ ಮೆರೆದರು.

ಕಾರ್ಯಕ್ರಮದಲ್ಲಿ ಉಮೇಶ ಬಾರಕೇರ, ಡಾ. ಅಬ್ದುಲ್ ಅಜೀಜ್ ಮುಲ್ಲಾ, ಡಾ. ಗಿರೀಶ ದೀಕ್ಷಿತ್, ಶಶಿಭಷಣ್ ದೇವೂರ, ಮೃತ್ಯುಂಜಯ ಹಿರೇಮಠ, ಎನ್.ಎಸ್.ಎಸ್. ಸಂಯೋಜನಾಧಿಕಾರಿ ಪ್ರಶಾಂತ ಮೇರವಾಡೆ, ಡಾ. ಉಡಚಪ್ಪ ಪೂಜಾರ ಸೇರಿದಂತೆ ಅಧ್ಯಾಪಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಉಪನ್ಯಾಸಕರಾದ ಪ್ರಕಾಶ ಮಾಚೇನಹಳ್ಳಿ ಕಾರ್ಯಕ್ರಮವನ್ನು ನಿರ್ವಹಿಸಿದರು.

### ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಕೌಶಲ್ಯ ಅಗತ್ಯ

## ಸರಕಾರಿ ಕಾಲೇಜುಗಳ ಅಸ್ತಿತ್ವದ ಪ್ರಶ್ನೆ ಎದುರಾಗಿದೆ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಸರಕಾರಿ ಕಾಲೇಜುಗಳಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳ ಬದುಕು-ಭವಿಷ್ಯ ರೂಪಿಸುವ ಹೊಣೆ ಬೋಧಕರ ಹೆಗಲಿಗಿದೆ ಎಂದು ಕಾಲೇಜು ಶಿಕ್ಷಣ ಇಲಾಖೆ ಕಲಬುರಗಿ ಪ್ರಾದೇಶಿಕ ಕಚೇರಿಯ ಜಂಟೀ ನಿರ್ದೇಶಕ ಪ್ರೊ.ಗೊಳ್ಳೆ ಶಿವಶರಣ. ಬಿ. ಹೇಳಿದರು.

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ಬೆಂಗಳೂರಿನ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಮತ್ತು ವಾಧ್ವಾನಿ ಫೌಂಡೇಷನ್ ಸಹಭಾಗಿತ್ವದಲ್ಲಿ ಕೊಪ್ಪಳ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ಲೇಸ್‌ಮೆಂಟ್ ಸೆಲ್ ಸಂಯುಕ್ತ ಆಶ್ರಯದಲ್ಲಿ ಬುಧವಾರ ನಡೆದ ಎರಡು ದಿನಗಳ ಆರ್ಟಿಫಿಸಿಯಲ್ ಇಂಟಲಿಜೆನ್ಸಿ ಆಧಾರಿತ ಉದ್ಯೋಗ ಕೌಶಲ್ಯ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಸರಕಾರಿ ಕಾಲೇಜುಗಳ ಅಸ್ತಿತ್ವದ ಪ್ರಶ್ನೆ ಎದುರಾಗಿದ್ದು, ಬೋಧಕರೆಲ್ಲ ತಂತ್ರಜ್ಞಾನ ಅರಿಯಬೇಕಿದೆ. ಅದರಲ್ಲೂ ಯುವ ಬೋಧಕರು ತಂತ್ರಜ್ಞಾನ ಅಳವಡಿಕೆಗೆ ಮುಂದಾಗಬೇಕು. ಖಾಸಗಿ



ಕಾಲೇಜುಗಳ ವಿದ್ಯಾರ್ಥಿಗಳಿಗಿಂತ ಸರಕಾರಿ ಕಾಲೇಜುಗಳಲ್ಲಿ ಅಧ್ಯಯನ ಮಾಡುವ ವಿದ್ಯಾರ್ಥಿಗಳು ಯಾವ ವಿಷಯದಲ್ಲಿ ಕಡಿಮೆ ಇಲ್ಲದಂತೆ ಪರಿಣತಿ ಸಾಧಿಸಬೇಕಿದೆ ಎಂದು ಅವರು ಕರೆ ನೀಡಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಪ್ರೊ. ತಿಮ್ಮಾರಡ್ಡಿ ಮೇಟಿ ಮಾತನಾಡಿ, ಕೃತಕ ಬುದ್ಧಿಮತ್ತೆಯ. ಪರಿಕಲ್ಪನೆ, ಉಗಮ, ವಿಕಾಸ ಹಾಗೂ ಉದ್ಯೋಗಾವಕಾಶಗಳ ಕುರಿತು ವಿವರಿಸಿದರು.

ಮುಖ್ಯ ಅತಿಥಿಗಳಾಗಿ ಕಲಬುರಗಿ ಪ್ರಾದೇಶಿಕ ಕಚೇರಿಯ ಸಹಾಯಕ ನಿರ್ದೇಶಕ ರಾಜೇಂದ್ರ ಸಿಂಧೆ, ವಿಶೇಷ ಅಧಿಕಾರಿಗಳಾದ ಡಾ. ಬಿ. ಸರೋಜಾ, ಡಾ. ಸೂರ್ಯಕಾಂತ ಉಮ್ಮಾಪುರೆ ಭಾಗವಹಿಸಿದ್ದರು. ವಾಧ್ವಾನಿ ಫೌಂಡೇಶನ್‌ನ ಮಾಸ್ಟರ್ ಟ್ರೇನರ್ ಕು.ಸ್ವಾತಿ ಪುತ್ರನ್ ಸಂಪನ್ಮೂಲ ವ್ಯಕ್ತಿಗಳಾಗಿ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಕಾಲೇಜಿನ ಸಿಬ್ಬಂದಿಯಾದ ಸಂತೋಷಿಕುಮಾರಿ, ಶಿವಬಸಪ್ಪ ಮಸ್ಕಿ, ಗೋಣಿಬಸಪ್ಪ, ಮಹಮ್ಮದ್ ಶಫಿ, ಬಸವರಾಜ ಕರುಗಲ್, ಶಿವರಾಮ್, ಸ್ಥಾನಿಕರಣ ಕೋಶ ವಿಭಾಗ ಸಂಚಾಲಕ ಶಿವನಾಥ್, ಡಾ. ಸಿ. ಬಿ ಚಿಲ್ಕರಾಗಿ, ತಳಬಾಳ ವಸತಿ ಪದವಿ ಕಾಲೇಜಿನ ಪ್ರಾಚಾರ್ಯ ಯಮನೂರಪ್ಪ, ಮಹಾಂತೇಶ ಮೈನಳ್ಳಿ, ರವಿಕಿರಣ್, ಅನುಷಾ, ಜಯಪ್ರಕಾಶ್ ಬಿರಾದಾರ್, ಸುರೇಶ, ಅಶೋಕ, ರಮೇಶ್, ಹಸನ್ ಇತರರು ಇದ್ದರು.

ಡಾ. ಭಾಗ್ಯಜ್ಯೋತಿ ನಿರೂಪಿಸಿದರು. ವಿದ್ಯಾರ್ಥಿನಿಯರಾದ ಚೈತ್ರಾ ಹಾಗೂ ಅಕ್ಷತಾ ಪ್ರಾರ್ಥಿಸಿದರು. ಜ್ಞಾನೇಶ್ವರ ಪತ್ತಾರ ಸ್ವಾಗತಿಸಿದರು. ಡಾ.ಪ್ರಕಾಶ್ ಬಳ್ಳಾರಿ ವಂದಿಸಿದರು.

## ವಿಶ್ವ ಪರಿಸರ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಇಲ್ಲಿನ ವಾ.ಕ.ರ.ಸಾ.ಸಂಸ್ಥೆ ಕೇಂದ್ರ ಕಚೇರಿಯಲ್ಲಿ ವಿಶ್ವ ಪರಿಸರ ದಿನದ ಅಂಗವಾಗಿ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗಾ ಎಂ. ಸಸಿಗಳನ್ನು ನೆಡುವುದರ ಮೂಲಕ ವಿಶ್ವ ಪರಿಸರ ದಿನಾಚರಣೆಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಕೇಂದ್ರ ಕಚೇರಿ ಆವರಣದಲ್ಲಿ ವಿವಿಧ ಹಣ್ಣಿನ ಸಸಿಗಳನ್ನು ನೆಡಲಾಯಿತು. ಮುಖ್ಯ ಸಂಚಾರ ವ್ಯವಸ್ಥಾಪಕರಾದ ವಿವೇಕಾನಂದ ವಿಶ್ವಜ್ಞ, ಮುಖ್ಯ ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿ ಪಿ.ವೈ. ನಾಯಕ್, ಮುಖ್ಯ ಯಾಂತ್ರಿಕ ಅಭಿಯಂತರರಾದ ಬಸವರಾಜ್ ಅಮ್ಮನವರ, ಕೇಂದ್ರ ಕಚೇರಿ ಅಧಿಕಾರಿ ಹಾಗೂ ಸಿಬ್ಬಂದಿಗಳು ಹಾಜರಿದ್ದರು.

## ಬಿತ್ತನೆ ಬೀಜ, ರಸಗೊಬ್ಬರ ಸಮರ್ಪಕ ಪ್ರಮಾಣದಲ್ಲಿ ಲಭ್ಯ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಮುಂಗಾರು ಹಂಗಾಮಿಗೆ ಗದಗ ಜಿಲ್ಲೆಗೆ ಅವಶ್ಯವಿರುವ ವಿವಿಧ ಬೆಳೆಗಳ ಬಿತ್ತನೆ ಬೀಜಗಳ ಹಾಗೂ ರಸಗೊಬ್ಬರದ ಪ್ರಮಾಣವನ್ನು ದಾಸ್ತಾನು ಮಾಡಲಾಗಿದ್ದು, ಬಿತ್ತನೆ ಬೀಜದ ಹಾಗೂ ರಸಗೊಬ್ಬರದ ಅಭಾವ ಇರುವುದಿಲ್ಲ.

ಬೇಡಿಕೆಯನ್ವಯ 7918 ಕ್ವಿಂಟಲ್ ವಿವಿಧ ಬೆಳೆಗಳ ಬಿತ್ತನೆ ಬೀಜಗಳಿಗೆ ಬೇಡಿಕೆ ಸಲ್ಲಿಸಿದ್ದು, 3654 ಕ್ವಿಂಟಲ್ ಪೂರೈಕೆಯಾಗಿದ್ದು, ವಿತರಣೆ ಪ್ರಗತಿಯಲ್ಲಿರುತ್ತದೆ. ಯಾವುದೇ ಬೆಳೆಯ ಬಿತ್ತನೆ ಬೀಜಗಳ ಅಭಾವ ಇರುವುದಿಲ್ಲ. ಜಿಲ್ಲೆಯಲ್ಲಿ ಒಟ್ಟು 14920 ಮೆಟ್ರಿಕ್ ಟನ್ ವಿವಿಧ ಶ್ರೇಣಿಯ ರಸಗೊಬ್ಬರದ ದಾಸ್ತಾನು ಇದ್ದು, ರಸಗೊಬ್ಬರದ ಅಭಾವ ಇರುವುದಿಲ್ಲ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬರಗಾಲದ ಬವಣೆ ನೀಗಲು ಶೆಟ್ಟಿಕೇರಿ ಸಸ್ಯಪಾಲನಾ ಕೇಂದ್ರದ ದಿಟ್ಟ ಹೆಜ್ಜೆ

# ಸಿದ್ಧವಾಗಿವೆ 2 ಲಕ್ಷಕ್ಕೂ ಅಧಿಕ ಸಸಿಗಳು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇತ್ತೀಚಿನ ಬರಗಾಲದ ಬವಣೆಯಿಂದ ತತ್ತರಿಸುತ್ತಿರುವ ಮನುಷ್ಯರು ಮತ್ತು ಪ್ರಾಣಿಗಳು, ನೆರಳಿಗಾಗಿ ಮರಗಳ ಮೊರೆಹೋಗುವದು ಸಹಜ. ಆದರೆ ಗಿಡಗಳನ್ನು ಬೆಳೆಸಲು ಚಿಂತಿಸದೆ ಗಿಡದ ನೆರಳನ್ನು ಹುಡುಕುವ ನಮ್ಮ ಪ್ರವೃತ್ತಿ ಇನ್ನು ಮುಂದೆಯಾದರೂ ಬದಲಾಗಬೇಕು ಎನ್ನುವ ನಿಟ್ಟಿನಲ್ಲಿ ಸರಕಾರ ಗಿಡ ಮರಗಳನ್ನು ಬೆಳೆಸುವದಕ್ಕೆ ಆದ್ಯತೆ ನೀಡುತ್ತಿದೆ.

ಮರಗಳನ್ನು ಬೆಳೆಸಲು ಸಸಿಗಳು ದೊರಕುವುದಿಲ್ಲ ಎನ್ನುವ ದೂರಿಗೆ ಉತ್ತರವಾಗಿ ಲಕ್ಷ್ಮೇಶ್ವರ ಸಮೀಪದ ಶೆಟ್ಟಿಕೇರಿ ಗ್ರಾಮದಲ್ಲಿ ಪ್ರಾದೇಶಿಕ ಮತ್ತು ಸಾಮಾಜಿಕ ಅರಣ್ಯ ಇಲಾಖೆಯವರು ಈಗಾಗಲೇ ರೈತರಿಗೆ ಸಾರ್ವಜನಿಕರಿಗೆ ನೀಡಲು



ಅನುಕೂಲವಾಗುವಂತೆ ಲಕ್ಷಾಂತರ ಸಸಿಗಳನ್ನು ಬೆಳೆಸಿದ್ದು, ರೈತರಿಗೆ ರಿಯಾಯತಿ ದರದಲ್ಲಿ ಭವಿಷ್ಯತ್ತಿನಲ್ಲಿ ಲಾಭವನ್ನು ತಂದು ಕೊಡುವ ಸಸಿಗಳನ್ನು ಬೆಳೆಸಲು ಉತ್ತೇಜನ ನೀಡುತ್ತಿದೆ.

ಶೆಟ್ಟಿಕೇರಿ ಗ್ರಾಮದಲ್ಲಿ ಪ್ರಾದೇಶಿಕ ಹಾಗೂ ಸಾಮಾಜಿಕ ಅರಣ್ಯ ಇಲಾಖೆ ಇಲ್ಲಿನ ಸುಮಾರು ಸುಮಾರು 20-25 ಎಕರೆ ಪ್ರದೇಶದಲ್ಲಿ ಪ್ರಾರಂಭಿಸಿರುವ ಸಸ್ಯಪಾಲನಾ ಕೇಂದ್ರದಲ್ಲಿ ವಿವಿಧ ನಮೂನೆಯ ಲಕ್ಷಾಂತರ ಸಸ್ಯಗಳನ್ನು ಬೆಳೆಸಲಾಗುತ್ತಿದ್ದು, ಸಸ್ಯಪಾಲನಾ ಕೇಂದ್ರವು ಸದ್ದಿಲ್ಲದೆ ಹಸಿರು ಕ್ರಾಂತಿಯಲ್ಲಿ ತೊಡಗಿಸಿಕೊಂಡಿರುವದು ಪರಿಸರ ಪ್ರೇಮಿಗಳನ್ನು ಮೆಚ್ಚಿಸದೆ ಇರಲಾರದು. ಇದರಲ್ಲಿ ಅರಣ್ಯ ಇಲಾಖೆಯ ಎಸ್.ಎಲ್. ವಿಭೂತಿ ಮತ್ತು ಅರಣ್ಯ ರಕ್ಷಕ ಮಂಜುನಾಥ ದೊಡ್ಡವಾಡ, ಮಾಂತೇಶ ಹಾಗೂ ತಂಡದವರ ಶ್ರಮ ಎದ್ದು ಕಾಣುತ್ತಿದೆ.

ಇಲ್ಲಿನ ಪ್ರಾದೇಶಿಕ ಅರಣ್ಯ ಇಲಾಖೆ ಮತ್ತು ಸಾಮಾಜಿಕ ಅರಣ್ಯ ಇಲಾಖೆ ವತಿಯಿಂದ ಹೆಬ್ಬೇವು, ಬೇವು, ಹುಣಸೆ, ಮಾವು, ಅರಳಿ, ಸಾಗವಾನಿ, ನುಗ್ಗೆ, ಬದಾಮಿ, ಕರಬೇವು, ಪೇರಲ, ಸೀತಾಫಲ, ಮಹಾಗನಿ, ದಾಸವಾಳ, ನೀರಲ, ನೆಲ್ಲಿ, ಬೀಟೆ, ರಕ್ತಚಂದನ, ಶ್ರೀಗಂಧ, ಚಳ್ಳೆ, ಹುಣಸೆ, ಹೊಳೆಮತ್ತಿ, ಹೊಳೆದಾಸವಾಳ, ಬಿದಿರು, ಸಿಲ್ವರ್‌ಓಕ್ ಸೇರಿದಂತೆ ಸುಮಾರು 2 ಲಕ್ಷಕ್ಕೂ ಅಧಿಕ ಸಸಿಗಳನ್ನು ಬೆಳೆಸಲಾಗಿದೆ. ಪರಿಸರ ಸಂರಕ್ಷಣೆಯಲ್ಲಿ ತೊಡಗುವ ಹಲವಾರು ಸಂಘ ಸಂಸ್ಥೆಗಳು, ರೈತರು ಈಗಾಗಲೇ ಮರಗಳನ್ನು ಬೆಳೆಸಲು ಇಲ್ಲಿಂದ ಸಸಿಗಳನ್ನು ಕೊಂಡ್ಯೊಯ್ಯುತ್ತಿದ್ದಾರೆ.

> ಪ್ರಾದೇಶಿಕ ಅರಣ್ಯ ಇಲಾಖೆಯಿಂದ ವಿವಿಧ ತಳಿಯ ಸಸಿಗಳನ್ನು ರೈತರಿಗೆ ರಿಯಾಯತಿ ದರದಲ್ಲಿ ನೀಡಲಾಗುತ್ತಿದ್ದು, ಹೆಬ್ಬೇವು ಹಾಗೂ ನುಗ್ಗೆ ರೈತರಿಗೆ ಆದಾಯ ತಂದುಕೊಡಲಿದೆ. ಸುಮಾರು 8-10 ವರ್ಷಗಳಲ್ಲಿ ಹೆಬ್ಬೇವು ಲಕ್ಷಾಂತರ ರೂ ಆದಾಯ ನೀಡುತ್ತದೆ. ರಸ್ತೆಯ ಅಕ್ಕಪಕ್ಕಗಳಲ್ಲಿ ನೆಡಲು ಹಾಗೂ ರೈತರು ಹೊಲಗಳಲ್ಲಿ ನೆಡಲು ಸಸಿಗಳನ್ನು ರಿಯಾಯತಿ ದರದಲ್ಲಿ ನೀಡಲಾಗುತ್ತಿದ್ದು, ಆಸಕ್ತರು ಇದರ ಸದುಪಯೋಗ ಪಡೆದುಕೊಳ್ಳಬಹುದು.
>
> **- ರಾಮಪ್ಪ ಪೂಜಾರ.**
> **ಪ್ರಾದೇಶಿಕ ವಲಯ ಅಧಿಕಾರಿ.**

> ಮೊದಲು ರೈತರಿಗೆ ನೀಡಲಾಗುವ ಸಸಿಗಳ ಬೆಲೆ 23 ರೂ.ನಂತೆ ಇದ್ದು, ಸರಕಾರ ಮರ-ಗಿಡಗಳ ಬೆಳವಣಿಗೆಗೆ ಅನೂಕೂಲ ಮಾಡಿಕೊಡುವ ಉದ್ದೇಶದಿಂದ ಪ್ರತಿ ಗಿಡಕ್ಕೆ 6 ರೂನಂತೆ ನಿಗದಿ ಮಾಡಿದೆ. ಸಸಿಗಳನ್ನು ಬೆಳೆಸುವ ನಿಟ್ಟಿನಲ್ಲಿ ಎಲ್ಲರು ಮುಂದಾಗಬೇಕು. ಯಾವುದೇ ಸಂಘ-ಸಂಸ್ಥೆಗಳು ಆಸಕ್ತಿವಹಿಸಿ ಬಂದಲ್ಲಿ ನಮ್ಮಲ್ಲಿ ಸಸಿಗಳನ್ನು ನೀಡಲಾಗುತ್ತದೆ.
>
> **- ಕೌಶಿಕ್ ದಳವಾಯಿ.**
> **ಸಾಮಾಜಿಕ ವಲಯ ಅರಣ್ಯ ಇಲಾಖೆ ಅಧಿಕಾರಿ.**

ಸಸಿಗಳಿಗೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಪ್ರಾದೇಶಿಕ ಉಪವಲಯ ಅರಣ್ಯಾಧಿಕಾರಿ ಎಂ.ಸಿ.ಹಳ್ಳಿಕೇರಿ-9741977651, ಅರಣ್ಯ ಪಾಲಕ ಮಂಜುನಾಥ ದೊಡ್ಡವಾಡ-9663011564, ಮಾಂತೇಶ-6362898696 ಇವರನ್ನು ಸಂಪರ್ಕಿಸಬಹುದಾಗಿದೆ.



VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka